ದಾವಣಗೆರೆಯಿಂದ

ಮುಂಜಾನೆಯ ಮೆರಗು

ಸಂಪಾದಕ: ರವಿಕುಮಾರ ಜೆ.ಓ

MUNJANEYA MERAGU

ಕನ್ನಡ ದಿನಪತ್ರಿಕೆ

Editor : RAVIKUMARA J.O.

Kannada Daily

Davangere **Volume :**1 **Issue:** 137 Thursday **12-11-2026 PRGI. NO. KNKAN/26/A4616,** Mob:- 8880222429 Page : 4 **Price :** 2-00/-

ದಾವಣಗೆರೆ ಸಂಪುಟ : 1 ಸಂಚಿಕೆ : 137 ಗುರುವಾರ **Email:** munjaneyameragu@gmail.com ಮೊ: 8880222429 ಪುಟ : 4 ಬೆಲೆ–ರೂ.2.00/–

ಬಿಳಿಚೋಡು ಗ್ರಾಮದ ಹಳೆಯ ಸೇತುವೆಗೆ ಕಾಯಕಲ್ಪ

10 ಕೋಟಿ ರೂ. ವೆಚ್ಚದಲ್ಲಿ ನೂತನ ಸೇತುವೆ ನಿರ್ಮಾಣಕ್ಕೆ ಚಾಲನೆ

“ಮುಂಜಾನೆಯ ಮೆರಗು”

ಜಗಳೂರು ನ, 11– ಅಭಿವೃದ್ಧಿಯ ನಿರೀಕ್ಷೆಯಲ್ಲಿದ್ದ ಬಿಳಿಚೋಡು ಗ್ರಾಮದ ಜನರಿಗೆ ಕೊನೆಗೂ ಸಿಹಿ ಸುದ್ದಿ. ಸುಮಾರು ಏಳು ದಶಕಗಳ ಕಾಲ ಸಾವಿರಾರು ವಾಹನಗಳ ಸಂಚಾರದ ಭಾರ ಹೊತ್ತು, ಕಾಲದ ಹೊಡೆತಕ್ಕೆ ಸಿಲುಕಿ ಶಿಥಿಲಾವಸ್ಥೆ ತಲುಪಿದ್ದ ಗ್ರಾಮದ ಹಳೆಯ ಸೇತುವೆಗೆ ಇದೀಗ ಮುಕ್ತಿ ದೊರೆಯುವ ಕಾಲ ಸನ್ನಿಹಿತವಾಗಿದೆ. ಶಾಸಕ ಬಿ. ದೇವೇಂದ್ರಪ್ಪ ಅವರ ವಿಶೇಷ ಪ್ರಯತ್ನದ ಫಲವಾಗಿ ಸುಮಾರು 10 ಕೋಟಿ ರೂ. ವೆಚ್ಚದಲ್ಲಿ ನೂತನ ಸೇತುವೆ ನಿರ್ಮಾಣ ಕಾಮಗಾರಿಗೆ ಚಾಲನೆ ದೊರೆತಿದೆ.



ಏಳು ದಶಕಗಳ ಇತಿಹಾಸ ಹೊತ್ತಿದ್ದ ಸೇತುವೆ!

ತಾಲೂಕಿನ ಬಿಳಿಚೋಡು ಗ್ರಾಮದ ಮೂಲಕ ಹಾದುಹೋಗುವ ರಾಜ್ಯ ಹೆದ್ದಾರಿ ಸಂಪರ್ಕ ರಸ್ತೆಯಲ್ಲಿರುವ ಸೇತುವೆಯನ್ನು ಸುಮಾರು 1957ರಲ್ಲಿ ನಿರ್ಮಿಸಲಾಗಿತ್ತು. ಅಂದಿನಿಂದ ಇಂದಿನವರೆಗೂ ಸುಮಾರು 69 ವರ್ಷಗಳ ಕಾಲ ಈ ಸೇತುವೆ ವಾಹನ ಸವಾರರಿಗೆ ಪ್ರಮುಖ ಸಂಪರ್ಕ ಕೊಂಡಿಯಾಗಿ ಸೇವೆ ಸಲ್ಲಿಸಿದೆ.

ಕಾಲ ಬದಲಾಯಿತು, ವಾಹನಗಳ ಸಂಖ್ಯೆ ಹೆಚ್ಚಾಯಿತು, ಸಾರಿಗೆ ವ್ಯವಸ್ಥೆಯಲ್ಲಿ ಸಾಕಷ್ಟು ಬದಲಾವಣೆಗಳಾದವು. ಆದರೆ ಸೇತುವೆ ಮಾತ್ರ ತನ್ನ ಹಳೆಯ ಸ್ವರೂಪದಲ್ಲಿಯೇ ಸಾವಿರಾರು ವಾಹನಗಳ ಸಂಚಾರದ ಭಾರವನ್ನು ಹೊತ್ತು ನಿಂತಿತ್ತು. ಪ್ರತಿನಿತ್ಯ ನೂರಾರು ವಾಹನಗಳು ಸಂಚರಿಸುತ್ತಿದ್ದರೂ, ಸೇತುವೆಯ ವಯಸ್ಸು ಮತ್ತು ಶಿಥಿಲಾವಸ್ಥೆ ಸಾರ್ವಜನಿಕರಲ್ಲಿ ಆತಂಕ ಮೂಡಿಸಿತ್ತು.

ಸುಮಾರು ಏಳು ದಶಕಗಳ ಇತಿಹಾಸ ಹೊಂದಿದ್ದ ಈ ಸೇತುವೆಯಲ್ಲಿ ಯಾವುದೇ ದೊಡ್ಡ ಅವಘಡ ಸಂಭವಿಸದೆ ಇಷ್ಟು ವರ್ಷಗಳ ಕಾಲ ಸಂಚಾರಕ್ಕೆ ಅವಕಾಶ ಕಲ್ಪಿಸಿರುವುದು ಗಮನಾರ್ಹ ಸಂಗತಿ. ಆದರೂ ಕಾಲಮಿತಿಯನ್ನು ಮೀರಿದ ಸೇತುವೆಗೆ ಆಧುನಿಕ ತಂತ್ರಜ್ಞಾನ ಹಾಗೂ ಸುರಕ್ಷತಾ ಮಾನದಂಡಗಳೊಂದಿಗೆ ಹೊಸ ರೂಪ ನೀಡಬೇಕಾದ ಅನಿವಾರ್ಯತೆ ಎದುರಾಗಿತ್ತು.

ಶಾಸಕ ದೇವೇಂದ್ರಪ್ಪ ಅವರಿಂದ ಕಾಯಕಲ್ಪಕ್ಕೆ ಆದ್ಯತೆ

ಬಿಳಿಚೋಡು ಗ್ರಾಮದ ಸೇತುವೆಯ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿದ ಶಾಸಕ ಬಿ. ದೇವೇಂದ್ರಪ್ಪ ಅವರು ನೂತನ ಸೇತುವೆ ನಿರ್ಮಾಣಕ್ಕೆ ವಿಶೇಷ ಆದ್ಯತೆ ನೀಡಿದರು. ಸಾರ್ವಜನಿಕರ ಬಹುದಿನಗಳ ಬೇಡಿಕೆಗೆ ಸ್ಪಂದಿಸಿ, ಸುಮಾರು 10 ಕೋಟಿ ರೂ. ವೆಚ್ಚದ ಸೇತುವೆ ನಿರ್ಮಾಣ ಕಾಮಗಾರಿಗೆ ಸಚಿವ ಟಿ. ರಾಘುಮೂರ್ತಿ ಅವರಿಂದ ಭೂಮಿಪೂಜೆ ನೆರವೇರಿಸುವ ಮೂಲಕ ಅಭಿವೃದ್ಧಿ ಕಾರ್ಯಕ್ಕೆ ಮುನ್ನುಡಿ ಬರೆದಿದ್ದಾರೆ.

ಲೋಕೋಪಯೋಗಿ ಇಲಾಖೆ ವತಿಯಿಂದ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದ್ದು, ಹಳೆಯ ಸೇತುವೆಯ ಬದಲಿಗೆ ಆಧುನಿಕ ವಿನ್ಯಾಸದ ನೂತನ ಸೇತುವೆ ನಿರ್ಮಾಣವಾಗಲಿರುವುದು ಈ ಭಾಗದ ಜನರಲ್ಲಿ ಹೊಸ ನಿರೀಕ್ಷೆ ಮೂಡಿಸಿದೆ.

ಗುಣಮಟ್ಟದ ಕಾಮಗಾರಿಗೆ ಆದ್ಯತೆ ಅಗತ್ಯ

ರಾಜ್ಯ ಹೆದ್ದಾರಿ ಸಂಪರ್ಕದ ಪ್ರಮುಖ ರಸ್ತೆಯಾಗಿರುವುದರಿಂದ ಈ ಮಾರ್ಗದಲ್ಲಿ ಪ್ರತಿನಿತ್ಯ ನೂರಾರು ವಾಹನಗಳು ಸಂಚರಿಸುತ್ತವೆ. ಹೀಗಾಗಿ ನೂತನ ಸೇತುವೆ ನಿರ್ಮಾಣದಲ್ಲಿ ಕೇವಲ ಕಾಮಗಾರಿ ಪೂರ್ಣಗೊಳಿಸುವುದಷ್ಟೇ ಮುಖ್ಯವಲ್ಲ; ದೀರ್ಘಕಾಲ ಬಾಳಿಕೆ ಬರುವಂತೆ ಗುಣಮಟ್ಟಕ್ಕೆ ಹೆಚ್ಚಿನ ಆದ್ಯತೆ ನೀಡಬೇಕಿದೆ. 1957ರಲ್ಲಿ ನಿರ್ಮಾಣಗೊಂಡಿದ್ದ ಹಳೆಯ ಸೇತುವೆ ಸುಮಾರು 69 ವರ್ಷಗಳ ಕಾಲ ಸಾರ್ವಜನಿಕರಿಗೆ ಸೇವೆ ಸಲ್ಲಿಸಿದೆ. ಈ ಹಿನ್ನೆಲೆಯಲ್ಲಿ ನೂತನ ಸೇತುವೆಯೂ ದಶಕಗಳ ಕಾಲ ಬಾಳಿಕೆ ಬರುವಂತೆ ತಾಂತ್ರಿಕ ಮಾನದಂಡಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ ಕಾಮಗಾರಿ ನಿರ್ವಹಿಸುವ ಜವಾಬ್ದಾರಿ ಅಧಿಕಾರಿಗಳು ಮತ್ತು ಗುತ್ತಿಗೆದಾರರ ಮೇಲಿದೆ.



ಗ್ಯಾರಂಟಿ ಯೋಜನೆಗಳ ಜತೆಗೆ ಅಭಿವೃದ್ಧಿಗೂ ಒತ್ತು

ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ನಡುವೆಯೂ ಕ್ಷೇತ್ರದ ಮೂಲಸೌಕರ್ಯ ಅಭಿವೃದ್ಧಿಗೆ ಆದ್ಯತೆ ನೀಡಲಾಗುತ್ತಿದೆ. ಈಗಾಗಲೇ ಉದ್ಘಟ್ಟ ಸೇತುವೆಗೆ ಕಾಯಕಲ್ಪ ನೀಡುವ ಪ್ರಯತ್ನ ನಡೆದಿದ್ದು, ಇದೀಗ ಬಿಳಿಚೋಡು ಗ್ರಾಮದ ಹಳೆಯ ಸೇತುವೆಯ ಬದಲಿಗೆ ನೂತನ ಸೇತುವೆ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗಿದೆ. ಮುಂದಿನ ದಿನಗಳಲ್ಲಿಯೂ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಆದ್ಯತೆ ನೀಡಲಾಗುವುದು ಎಂದು ಶಾಸಕ ಬಿ. ದೇವೇಂದ್ರಪ್ಪ ತಿಳಿಸಿದ್ದಾರೆ.

ಒಟ್ಟಿನಲ್ಲಿ, ಸುಮಾರು ಏಳು ದಶಕಗಳ ಕಾಲ ಬಿಳಿಚೋಡು ಗ್ರಾಮದ ಜನರ ಸಂಚಾರಕ್ಕೆ ಆಸರೆಯಾಗಿದ್ದ ಹಳೆಯ ಸೇತುವೆ ಇತಿಹಾಸದ ಪುಟ ಸೇರಲಿದ್ದು, ಅದರ ಸ್ಥಾನದಲ್ಲಿ ನೂತನ ಸೇತುವೆ ನಿರ್ಮಾಣವಾಗಲಿದೆ. ಇದು ಕೇವಲ ಸೇತುವೆಯ ಬದಲಾವಣೆಯಲ್ಲ; ಈ ಭಾಗದ ಜನರ ಸುರಕ್ಷಿತ ಸಂಚಾರ, ವ್ಯಾಪಾರ–ವಹಿವಾಟು ಹಾಗೂ ಸಾರಿಗೆ ಸಂಪರ್ಕಕ್ಕೆ ಹೊಸ ಭರವಸೆಯಾಗಿದೆ.

ಚಾಲಕನ ನಿಯಂತ್ರಣ ತಪ್ಪಿ ಡಿವೈಡರ್‌ಗೆ ಡಿಕ್ಕಿ ಹೊಡೆದ ಬೊಲೆರೊ ವಾಹನ ಪಲ್ಟಿ: ಇಬ್ಬರಿಗೆ ಗಂಭೀರ ಗಾಯ

“ಮುಂಜಾನೆಯ ಮೆರಗು”

ಜಗಳೂರು, ನ.11– ಚಾಲಕನ ನಿಯಂತ್ರಣ ತಪ್ಪಿದ ಬೊಲೆರೊ ವಾಹನ ರಸ್ತೆ ಬದಿಯ ಡಿವೈಡರ್‌ಗೆ ಡಿಕ್ಕಿ ಹೊಡೆದು ಪಲ್ಟಿಯಾದ ಘಟನೆ ತಾಲೂಕಿನ ಗಡಿ ಗ್ರಾಮವಾದ ಬೊಗಳೇರಹಟ್ಟಿ ಸಮೀಪದ ರಾಷ್ಟ್ರೀಯ ಹೆದ್ದಾರಿ–50ರಲ್ಲಿ ಮಂಗಳವಾರ ತಡರಾತ್ರಿ ಸಂಭವಿಸಿದೆ.



ಹೊಸಪೇಟೆ ಕಡೆಯಿಂದ ಸಿರಾ ಕಡೆಗೆ ತೆರಳುತ್ತಿದ್ದ ಬೊಲೆರೊ ವಾಹನ ಚಾಲಕನ ನಿಯಂತ್ರಣ ತಪ್ಪಿ ರಸ್ತೆ ವಿಭಜಕಕ್ಕೆ ಡಿಕ್ಕಿ ಹೊಡೆದ ಪರಿಣಾಮ ವಾಹನ ಪಲ್ಟಿಯಾಗಿದೆ. ಅಪಘಾತದಲ್ಲಿ ವಾಹನ ಚಾಲಕ, ಹಿರಿಯೂರು ಪಟ್ಟಣದ 30 ವರ್ಷದ ನಾಗಭೂಷಣ ಹಾಗೂ ಸಿರಾ ತಾಲೂಕಿನ 27 ವರ್ಷದ ಜಾಫರ್ ಎಂಬುವರು ಗಂಭೀರವಾಗಿ ಗಾಯಗೊಂಡಿದ್ದಾರೆ.

ಅಪಘಾತದ ಮಾಹಿತಿ ತಿಳಿಯುತ್ತಿದ್ದಂತೆ ಸ್ಥಳಕ್ಕೆ ಧಾವಿಸಿದ ಜಗಳೂರು ಅಗ್ನಿಶಾಮಕ ಠಾಣಾಧಿಕಾರಿ ಎಂ.ಎನ್. ಖಾಸೀಂಸಾಬ್ ಹಾಗೂ ಸಿಬ್ಬಂದಿ, ಅಗ್ನಿಶಾಮಕ ವಾಹನದಲ್ಲಿದ್ದ ರಕ್ಷಣಾ ಉಪಕರಣಗಳ ನೆರವಿನಿಂದ ಬೊಲೆರೊ ವಾಹನದ ಕ್ಯಾಬಿನ್‌ನಲ್ಲಿ ಸಿಲುಕಿಕೊಂಡಿದ್ದ ಚಾಲಕ ಹಾಗೂ ಮತ್ತೊಬ್ಬ ವ್ಯಕ್ತಿಯನ್ನು ಸುರಕ್ಷಿತವಾಗಿ ಹೊರತೆಗೆದು ರಕ್ಷಿಸುವಲ್ಲಿ ಯಶಸ್ವಿಯಾದರು.

ನಂತರ ಗಾಯಾಳುಗಳನ್ನು ಆಂಬುಲೆನ್ಸ್ ಮೂಲಕ ಚಿತ್ರದುರ್ಗ ಜಿಲ್ಲಾ ಸರ್ಕಾರಿ ಆಸ್ಪತ್ರೆಗೆ ರವಾನಿಸಲಾಗಿದ್ದು, ಅಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಬಿಳಿಚೋಡು ಭಾಗದಲ್ಲಿ ಇಂದು 8 ಗಂಟೆ ವಿದ್ಯುತ್ ವ್ಯತ್ಯಯ

“ಮುಂಜಾನೆಯ ಮೆರಗು”

ಜಗಳೂರು ನ, 11– ಬಿಳಿಚೋಡು ಪಟ್ಟಣದಲ್ಲಿ ರಸ್ತೆ ಅಗಲೀಕರಣ ಕಾಮಗಾರಿ ಹಿನ್ನೆಲೆಯಲ್ಲಿ ರಸ್ತೆ ಬದಿಯಲ್ಲಿರುವ ಮರಗಳನ್ನು ತೆರವುಗೊಳಿಸುವ ಕಾರ್ಯ ಕೈಗೊಳ್ಳಲಿರುವುದರಿಂದ ಇಂದು (ನ.12) ಬೆಳಿಗ್ಗೆ 9 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ ಎಂದು ಬೆಸ್ಕಾಂ ಎಇಇ ಮಲ್ಲಿಕಾರ್ಜುನ ಹೇಳಿದರು.

66/11 ಕೆ.ವಿ. ಬಿಳಿಚೋಡು ವಿದ್ಯುತ್ ವಿತರಣಾ ಕೇಂದ್ರದ ಎಫ್–08 ಬಿಳಿಚೋಡು ಎನ್.ಜೆ.ವೈ. 11 ಕೆ.ವಿ. ವಿದ್ಯುತ್ ಮಾರ್ಗದ ವ್ಯಾಪ್ತಿಯಲ್ಲಿ ಕಾಮಗಾರಿ ನಡೆಯಲಿರುವುದರಿಂದ ಬಿಳಿಚೋಡು, ಪಾಲನಾಯಕನಹಳ್ಳಿ, ಚೆಂಬಕಟ್ಟೆ ಹಾಗೂ ಮುಗ್ದಿದರಗಿಹಳ್ಳಿ ಗ್ರಾಮಗಳಲ್ಲಿ ವಿದ್ಯುತ್ ಪೂರೈಕೆ ಸ್ಥಗಿತಗೊಳ್ಳಲಿದೆ.

ಸಾರ್ವಜನಿಕರು ಹಾಗೂ ರೈತರು ವಿದ್ಯುತ್ ವ್ಯತ್ಯಯವನ್ನು ಗಮನದಲ್ಲಿಟ್ಟುಕೊಂಡು ಅಗತ್ಯ ಮುನ್ನೆಚ್ಚರಿಕೆ ವಹಿಸುವಂತೆ ಹಾಗೂ ಕಾಮಗಾರಿಗೆ ಸಹಕರಿಸುವಂತೆ ಮನವಿ ಮಾಡಿದ್ದಾರೆ.

ಕಾರ್ಮಿಕ ಇಲಾಖೆಯಲ್ಲಿ ಒನಕೆ ಓಬವ್ವ ಜಯಂತಿ ಆಚರಣೆ

“ಮುಂಜಾನೆಯ ಮೆರಗು”

ಜಗಳೂರು ನ, 11– ಪಟ್ಟಣದ ಎಪಿಎಂಸಿ ಆವರಣದಲ್ಲಿರುವ ಕಾರ್ಮಿಕ ಇಲಾಖೆಯ ಕಚೇರಿಯಲ್ಲಿ ವೀರ ವನಿತೆ ಒನಕೆ ಓಬವ್ವ ಅವರ ಜಯಂತಿಯನ್ನು ಆಚರಿಸಲಾಯಿತು.



ಈ ಸಂದರ್ಭದಲ್ಲಿ ಮಾತನಾಡಿದ ಕಾರ್ಮಿಕ ಇಲಾಖೆಯ ಸಿ.ಒ. ಆಶಾ ಅವರು, ಒನಕೆ ಓಬವ್ವ ಅವರು ಕೇವಲ ಮಹಿಳಾ ಸಂಕುಲಕ್ಕೆ ಮಾತ್ರವಲ್ಲದೆ, ಇಡೀ ಸಮಾಜಕ್ಕೆ ಧೈರ್ಯ, ಸಾಹಸ ಹಾಗೂ ಹೋರಾಟದ ಮನೋಭಾವಕ್ಕೆ ಮಾದರಿಯಾಗಿದ್ದಾರೆ. ನಾಡಿನ ರಕ್ಷಣೆಗಾಗಿ ಪ್ರಾಣದ ಹಂಗು ತೊರೆದು ಹೋರಾಡಿದ ಅವರ ಶೌರ್ಯ, ಸಾಹಸ ಮತ್ತು ದೇಶಪ್ರೇಮದ ಗುಣಗಳನ್ನು ನಾವೆಲ್ಲರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಅವರ ಆದರ್ಶಗಳು ಇಂದಿನ ಯುವ ಪೀಳಿಗೆಗೆ ಸದಾ ಸ್ಫೂರ್ತಿಯಾಗಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಕಾರ್ಮಿಕ ಇಲಾಖೆಯ ಸಿಬ್ಬಂದಿ ಉಪಸ್ಥಿತರಿದ್ದರು.

ಅಲೆಮಾರಿ ಸಮುದಾಯದ ನಿವೇಶನಗಳಿಗೆ ಮೂಲಸೌಕರ್ಯ ಕಲ್ಪಿಸಲು ಒತ್ತಾಯ

“ಮುಂಜಾನೆಯ ಮೆರಗು”

ಜಗಳೂರು ನ, 11– ಅಲೆಮಾರಿ ಹಾಗೂ ಅರೆ ಅಲೆಮಾರಿ ಸಮುದಾಯದವರಿಗೆ ನೀಡಿರುವ ನಿವೇಶನಗಳಿಗೆ ವಿದ್ಯುತ್, ಚರಂಡಿ ಸೇರಿದಂತೆ ಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸಬೇಕು ಎಂದು ಅಲೆಮಾರಿ ಹಾಗೂ ಅರೆ ಅಲೆಮಾರಿ ಸಮುದಾಯದ ತಾಲೂಕು ಅಧ್ಯಕ್ಷ ಕುರಿ ಜಯ್ಯಣ್ಣ ಒತ್ತಾಯಿಸಿದರು.

ಪಟ್ಟಣದ ಅಶ್ವತ್ಥರೆಡ್ಡಿ ನಗರದಲ್ಲಿ ಬುಧವಾರ ಸಂಜೆ ಖಾಸಗಿ ಜಮೀನಿನಲ್ಲಿ ಬಟ್ಟೆಯ ಗುಡಿಸಲುಗಳನ್ನು ನಿರ್ಮಿಸಿಕೊಂಡು ಜೀವನ ನಡೆಸುತ್ತಿರುವ ಸಿಂದೋಳ, ಸಿಂದೋಗಿ ಹಾಗೂ ಸುಡುಗಾಡು ಸಿದ್ಧ ಸಮುದಾಯದ ಕುಟುಂಬಗಳಿಗೆ ಆರಾಧನಾ ಆರ್.ಎಸ್. ಅವರ ಜನ್ಮದಿನದ ಅಂಗವಾಗಿ ಬ್ರೇಡ್ ಹಣ್ಣುಗಳನ್ನು ವಿತರಿಸಿ ಅವರು ಮಾತನಾಡಿದರು.



ಶಾಸಕ ಬಿ. ದೇವೇಂದ್ರಪ್ಪ ಅವರ ಸಹಕಾರದಿಂದ ಅಲೆಮಾರಿ ಸಮುದಾಯದವರಿಗೆ ನಿವೇಶನಗಳು ದೊರೆತಿವೆ. ಆದರೆ, ನಿವೇಶನಗಳಲ್ಲಿ ವಾಸಿಸುತ್ತಿರುವ ಕುಟುಂಬಗಳಿಗೆ ಅಗತ್ಯ ಮೂಲಸೌಕರ್ಯಗಳ ಕೊರತೆಯಿದೆ. ಪಟ್ಟಣ ಪಂಚಾಯಿತಿ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ವಿದ್ಯುತ್ ದೀಪ, ಚರಂಡಿ ವ್ಯವಸ್ಥೆ ಸೇರಿದಂತೆ ಕುಡಿಯುವ ನೀರು ಹಾಗೂ ಇತರೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಲು ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ಸಮಾಜದಲ್ಲಿ ಉಳ್ಳವರು ಇಲ್ಲದವರಿಗೆ ನೆರವಾಗುವ ಹಾಗೂ ದಾನ ಮಾಡುವ ಗುಣಗಳನ್ನು ಬೆಳೆಸಿಕೊಳ್ಳಬೇಕು. ಇಂತಹ ಮಾನವೀಯ ಕಾರ್ಯಗಳು ಸಮಾಜದಲ್ಲಿ ಪರಸ್ಪರ ಪ್ರೀತಿ, ವಿಶ್ವಾಸ ಮತ್ತು ಸಹಬಾಳ್ವೆಯನ್ನು ಹೆಚ್ಚಿಸುತ್ತವೆ ಎಂದರು.

ಈ ಸಂದರ್ಭದಲ್ಲಿ ಅಲೆಮಾರಿ ಸಮುದಾಯದ ಮಾರಪ್ಪ, ರಮೇಶ್ ಸೇರಿದಂತೆ ಸಮುದಾಯದ ಮುಖಂಡರು ಹಾಗೂ ಇತರರು ಉಪಸ್ಥಿತರಿದ್ದರು.

ಮೇಯುತ್ತಿದ್ದ ದೀಡೀರ್ ಎರಡು ಹಸುಗಳ ಸಾವು

ಜೀವನಾಧಾರವಾಗಿದ್ದ ಹಸುಗಳನ್ನು ಕಳೆದುಕೊಂಡು ಶಾಂತಮ್ಮ ಕಣ್ಣೀರು

“ಮುಂಜಾನೆಯ ಮೆರಗು”

ಜಗಳೂರು, ನ.11– ತಾಲೂಕಿನ ಸತ್ಯ ಗ್ರಾಮದ ಅಂಬೇಡ್ಕರ್ ವಸತಿ ಶಾಲೆಯ ಸಮೀಪ ಬುಧವಾರ ಜಮೀನಿನಲ್ಲಿ ಮೇಯುತ್ತಿದ್ದ ಎರಡು ಹಸುಗಳು ನಿಗೂಢ ಮೃತಪಟ್ಟಿರುವ ಘಟನೆ ನಡೆದಿದೆ.

ಸತ್ಯ ಗ್ರಾಮದ ಶಾಂತಮ್ಮ ಎಂಬುವರಿಗೆ ಸೇರಿದ ಎರಡು ಹಸುಗಳು ವಿದ್ಯುತ್ ಪ್ರವಹಿಸಿದ ಪರಿಣಾಮ ಸ್ಥಳದಲ್ಲೇ ಸಾವನ್ನಪ್ಪಿವೆ. ಮೃತಪಟ್ಟ ಹಸುಗಳ ಮೌಲ್ಯ ಸುಮಾರು ಒಂದು ಲಕ್ಷ ರೂಪಾಯಿಗೂ ಅಧಿಕ ಎಂದು ಅಂದಾಜಿಸಲಾಗಿದೆ.

ಹಸುಗಳನ್ನೇ ನಂಬಿಕೊಂಡು ಜೀವನ ಸಾಗಿಸುತ್ತಿದ್ದ ಶಾಂತಮ್ಮ ಅವರಿಗೆ ಈ ಘಟನೆ ಆರ್ಥಿಕವಾಗಿ ದೊಡ್ಡ ಆಘಾತ ನೀಡಿದೆ. ಜೀವನಾಧಾರವಾಗಿದ್ದ ಎರಡು ಹಸುಗಳನ್ನು ಏಕಕಾಲದಲ್ಲಿ ಕಳೆದುಕೊಂಡಿರುವುದರಿಂದ ಶಾಂತಮ್ಮ ಅವರ ಕುಟುಂಬ ಕಣ್ಣೀರಿನಲ್ಲಿ ಮುಳುಗಿದೆ.

ಘಟನೆ ತಿಳಿಯುತ್ತಿದ್ದಂತೆ ಪಶುಪಾಲನಾ ಇಲಾಖೆ ಹಾಗೂ ಬೆಸ್ಕಾಂ ಇಲಾಖೆಯ ಅಧಿಕಾರಿಗಳ ತಂಡ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದೆ. ನಿಖರ ಕಾರಣವೇನು ಎಂಬುದರ ಕುರಿತು ಅಧಿಕಾರಿಗಳು ಪರಿಶೀಲನೆ ಕೈಗೊಂಡಿದ್ದಾರೆ.



ವಸತಿ, ನಿವೇಶನ ರಹಿತರಿಗೆ ಸೂರು ಕಲ್ಪಿಸಲು ಹೋರಾಟ ರೂಪಿಸಲಾಗುವುದು: ಮಾದಿಹಳ್ಳಿ ಮಂಜುನಾಥ್

“ಮುಂಜಾನೆಯ ಮೆರಗು”

ಜಗಳೂರು, ನ.11– ತಾಲ್ಲೂಕಿನಾದ್ಯಂತ ವಸತಿ ಹಾಗೂ ನಿವೇಶನ ರಹಿತ ಬಡ ಕುಟುಂಬಗಳಿಗೆ ಸೂರು ಕಲ್ಪಿಸುವಂತೆ ಒತ್ತಾಯಿಸಿ ಮುಂದಿನ ದಿನಗಳಲ್ಲಿ ಸಂಘಟಿತ ಹೋರಾಟ ರೂಪಿಸಲಾಗುವುದು ಎಂದು ಭಾರತ ಕಮ್ಯುನಿಸ್ಟ್ ಪಕ್ಷದ (ಸಿಪಿಐ) ತಾಲ್ಲೂಕು ಕಾರ್ಯದರ್ಶಿ ಮಾದಿಹಳ್ಳಿ ಮಂಜುನಾಥ್ ತಿಳಿಸಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸಿಪಿಐ ಪಕ್ಷದ ವತಿಯಿಂದ ಆಯೋಜಿಸಿದ್ದ ತಾಲ್ಲೂಕು ಮಂಡಳಿ ಸಭೆಯಲ್ಲಿ ಮಾತನಾಡಿದ ಅವರು, ತಾಲ್ಲೂಕಿನಲ್ಲಿ ಕಳೆದ ಹಲವು ವರ್ಷಗಳಿಂದ ಅರ್ಹ ಫಲಾನುಭವಿಗಳಿಗೆ ಮನೆಗಳು ಮಂಜೂರಾಗದೆ ವಸತಿ ಸಮಸ್ಯೆ ತೀವ್ರಗೊಂಡಿದೆ. ಕೆಲವೆಡೆ ಮನೆಗಳು ಮಂಜೂರಾಗಿದ್ದರೂ ಅನುದಾನದ ಕೊರತೆಯಿಂದ ನಿರ್ಮಾಣ ಕಾಮಗಾರಿಗಳು ಅರ್ಧಕ್ಕೆ ಸ್ಥಗಿತಗೊಂಡಿವೆ. ಸ್ವಂತ ಮನೆ ಹಾಗೂ ನಿವೇಶನ ಇಲ್ಲದೆ ಬಾಡಿಗೆ ಮನೆಗಳಲ್ಲಿ ಜೀವನ ಸಾಗಿಸುತ್ತಿರುವ ಬಡವರು, ಕೂಲಿ ಕಾರ್ಮಿಕರು ಮತ್ತು ನಿರ್ಗತಿಕ ಕುಟುಂಬಗಳು ಸಂಕಷ್ಟ ಎದುರಿಸುತ್ತಿವೆ ಎಂದು ಹೇಳಿದರು.



ಈ ಕುರಿತು ಸಭೆಯಲ್ಲಿ ಸುದೀರ್ಘವಾಗಿ ಚರ್ಚಿಸಲಾಗಿದ್ದು, ಮುಂದಿನ ದಿನಗಳಲ್ಲಿ ಹೋರಾಟ ಹಾಗೂ ಸಮಾವೇಶಗಳನ್ನು ಹಮ್ಮಿಕೊಳ್ಳುವ ಮೂಲಕ ಸರ್ಕಾರದ ಗಮನ ಸೆಳೆಯಲಾಗುವುದು. ವಿವಿಧ ವಸತಿ ಯೋಜನೆಗಳಡಿ ಅರ್ಹ ಫಲಾನುಭವಿಗಳನ್ನು ಗುರುತಿಸಿ ಮನೆ ನಿರ್ಮಾಣಕ್ಕೆ ಅವಕಾಶ ಕಲ್ಪಿಸಬೇಕು. ಹಲವು ವರ್ಷಗಳಿಂದ ನಿವೇಶನಕ್ಕಾಗಿ ಕಾಯುತ್ತಿರುವ ಬಡ ಕುಟುಂಬಗಳಿಗೆ ಆದ್ಯತೆ ಮೇರೆಗೆ ನಿವೇಶನ ಹಂಚಿಕೆ ಮಾಡಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಸಿಪಿಐ ಪಕ್ಷದ ಸಹಕಾರ್ಯದರ್ಶಿ ಗೊಲ್ಲರಹಟ್ಟಿ ತಿಪ್ಪೇಸ್ವಾಮಿ, ಪದಾಧಿಕಾರಿಗಳಾದ ನಿಬಗೂರು ಲಿಂಗರಾಜ್, ಉಮೇಶ್, ಲಕ್ಕಿ, ತಿಪ್ಪಮ್ಮ, ಮಹಾಲಕ್ಷ್ಮಿ ಸೇರಿದಂತೆ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

Editor, Publisher & Owner of the News Paper: RAVIKUMARA J.O, MUNJANEYA MERAGU, JCR BADAVANE, Jagalur- 577-528, Davanagere (D)Karnataka, Printed by: MALLIKARJUNAPPA H G. Printed at: SHIVA MEDIA HOUSE, No.900/A2, Opp-Banashankari Temple Arch, Main Roan, Davanagere, Karnataka-577004.

ಸೋನಿಯಾ ಗಾಂಧಿ ಅವರ ‘Belonging: A Journey of Love’ ಕೃತಿ ಸ್ವೀಕರಿಸಿದ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್

“ಮುಂಜಾನೆಯ ಮೆರಗು”

ದಾವಣಗೆರೆ ನ, 11– ಕಾಂಗ್ರೆಸ್ ಪಕ್ಷದ ಹಿರಿಯ ನಾಯಕಿ ಹಾಗೂ ಭಾರತೀಯ ರಾಜಕೀಯದಲ್ಲಿ ವಿಶಿಷ್ಟ ನಾಯಕತ್ವದ ಛಾಪು ಮೂಡಿಸಿರುವ ಸೋನಿಯಾ ಗಾಂಧಿ ಅವರ ಜೀವನ ಪಯಣವನ್ನು ಅನಾವರಣಗೊಳಿಸುವ **‘Belonging: A Journey of Love’** ಪುಸ್ತಕವನ್ನು ಸ್ವೀಕರಿಸಿರುವುದಕ್ಕೆ ದಾವಣಗೆರೆ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಸಂತಸ ವ್ಯಕ್ತಪಡಿಸಿದ್ದಾರೆ.

ಈ ಕುರಿತು ತಮ್ಮ ಅಭಿಪ್ರಾಯ ಹಂಚಿಕೊಂಡಿರುವ ಅವರು, ಸೋನಿಯಾ ಗಾಂಧಿ ಅವರ ಬದುಕು ಕೇವಲ ರಾಜಕೀಯ ನಾಯಕತ್ವದ ಕಥೆಯಲ್ಲ. ಅದು ಪ್ರೀತಿ, ತ್ಯಾಗ, ಸಹನೆ, ಧೈರ್ಯ ಹಾಗೂ ಜನಸೇವೆಯ ಬದ್ಧತೆಯನ್ನು



ಒಳಗೊಂಡ ಸ್ಫೂರ್ತಿದಾಯಕ ಜೀವನ ಪಯಣವಾಗಿದೆ ಎಂದು ತಿಳಿಸಿದ್ದಾರೆ.

ಸವಾಲಿನ ಸಂದರ್ಭಗಳಲ್ಲಿಯೂ ಅವರು ಪ್ರದರ್ಶಿಸಿದ ದೃಢನಿಶ್ಚಯ, ದೂರದೃಷ್ಟಿ ಹಾಗೂ ಜನಪರ ಕಾಳಜಿ ಸಾರ್ವಜನಿಕ ಜೀವನದಲ್ಲಿ ತೊಡಗಿಸಿಕೊಂಡಿರುವ ಪ್ರತಿಯೊಬ್ಬರಿಗೂ ಮಾದರಿಯಾಗಿದೆ. ವಿಶೇಷವಾಗಿ ಮಹಿಳೆಯಾಗಿ ಹಲವು ಸವಾಲುಗಳನ್ನು ಎದುರಿಸಿ ದೇಶದ ರಾಜಕೀಯದಲ್ಲಿ ಪ್ರಭಾವಶಾಲಿ ನಾಯಕತ್ವ ನೀಡಿರುವ ಅವರ ಸಾಧನೆ ಮಹಿಳಾ ಜನಪ್ರತಿನಿಧಿಗಳಿಗೆ ಸ್ಫೂರ್ತಿಯಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಪ್ರೀತಿ, ಅಗಲಿಕೆ, ಬದುಕಿನ ಅನುಭವಗಳು ಹಾಗೂ ತನ್ನತನದ ಹುಡುಕಾಟದ ವಿವಿಧ ಮಜಲುಗಳನ್ನು ಒಳಗೊಂಡಿರುವ ಈ ಕೃತಿಯನ್ನು ಓದಲು ತಾವು ಉತ್ಸುಕಳಾಗಿರುವುದಾಗಿ ಡಾ. ಪ್ರಭಾ ಮಲ್ಲಿಕಾರ್ಜುನ್ ತಿಳಿಸಿದ್ದಾರೆ.

ವಿದ್ಯುತ್ ಅವಘಡ ತಡೆಗೆ ಎಲ್‌ಟಿ ಓವರ್‌ಹೆಡ್ ತಂತಿಗಳ ಬದಲಿಗೆ ಎಬಿ ಕೇಬಲ್ ಅಳವಡಿಕೆ

“ಮುಂಜಾನೆಯ ಮೆರಗು”

ದಾವಣಗೆರೆ ನ, 11– ನಗರದ ವಿದ್ಯುತ್ ವಿತರಣಾ ವ್ಯವಸ್ಥೆಯನ್ನು ಆಧುನೀಕರಿಸುವ ಹಾಗೂ ವಿದ್ಯುತ್ ಅವಘಡಗಳನ್ನು ತಡೆಗಟ್ಟುವ ಉದ್ದೇಶದಿಂದ ಬೆಸ್ಕಾಂ ವತಿಯಿಂದ ಎಲ್‌ಟಿ ಓವರ್‌ಹೆಡ್ ಕಂಡಕ್ಟರ್‌ಗಳನ್ನು ಎಬಿ ಕೇಬಲ್‌ಗಳಿಂದ ಬದಲಾಯಿಸುವ ಕಾಮಗಾರಿಗೆ ಚಾಲನೆ ನೀಡಲಾಯಿತು.



ನಗರದ ಗಡಿಯಾರ ಕಂಬ (ಕ್ಲಾಕ್ ಟವರ್) ಬಳಿ ಹಮ್ಮಿಕೊಳ್ಳಲಾಗಿದ್ದ ಕಾಮಗಾರಿಯ ಪೂಜಾ ಕಾರ್ಯಕ್ರಮದಲ್ಲಿ ಶಾಸಕ ಸಮರ್ಥ್ ಶಾಮನೂರು ಭಾಗವಹಿಸಿದರು.

ಹಳೆಯ ವಿದ್ಯುತ್ ತಂತಿಗಳ ಬದಲಿಗೆ ಆಧುನಿಕ ಎಬಿ ಕೇಬಲ್‌ಗಳನ್ನು ಅಳವಡಿಸುವುದರಿಂದ ವಿದ್ಯುತ್ ಅವಘಡಗಳ ಸಾಧ್ಯತೆ ಕಡಿಮೆಯಾಗಲಿದ್ದು, ಸಾರ್ವಜನಿಕರ ಸುರಕ್ಷತೆಗೆ ಹೆಚ್ಚಿನ ಆದ್ಯತೆ ದೊರೆಯಲಿದೆ. ಅಲ್ಲದೆ, ವಿದ್ಯುತ್ ವಿತರಣಾ ವ್ಯವಸ್ಥೆಯ ಗುಣಮಟ್ಟ ಸುಧಾರಿಸಿ, ಗ್ರಾಹಕರಿಗೆ ಸುರಕ್ಷಿತ ಹಾಗೂ ನಿರಂತರ ವಿದ್ಯುತ್ ಪೂರೈಕೆಗೆ ಅನುಕೂಲವಾಗಲಿದೆ.

ನಗರದ ಮೂಲಸೌಕರ್ಯ ಅಭಿವೃದ್ಧಿ ಮತ್ತು ಸಾರ್ವಜನಿಕರ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ಇಂತಹ ಕಾಮಗಾರಿಗಳಿಗೆ ಆದ್ಯತೆ ನೀಡಲಾಗುತ್ತಿದೆ ಎಂದು ತಿಳಿಸಲಾಯಿತು.

ಜಾಗತಿಕ ಸಂಸ್ಕೃತಿಯ ಮಹಾಯಾನ ರಚಿಸಿದ ವೀರಪ್ಪ ಮೊಯ್ಲಿ ಸಾಧನೆ ಕನ್ನಡಿಗರಿಗೆ ಹೆಮ್ಮೆ: ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ

“ಮುಂಜಾನೆಯ ಮೆರಗು”

ಮೈಸೂರು ನ, 11– ಮಾಜಿ ಮುಖ್ಯಮಂತ್ರಿ ಹಾಗೂ ಮಾಜಿ ಕೇಂದ್ರ ಸಚಿವ ಡಾ. ಎಂ. ವೀರಪ್ಪ ಮೊಯ್ಲಿ ಅವರು ರಚಿಸಿರುವ ‘ವಿಶ್ವಸಂಸ್ಕೃತಿಯ ಮಹಾಯಾನ’ ಗದ್ಯ ಮಹಾಕಾವ್ಯದ ನಾಲ್ಕನೇ ಸಂಪುಟದ ಬಿಡುಗಡೆ ಸಮಾರಂಭದಲ್ಲಿ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ ಭಾಗವಹಿಸಿ, ಸಾಹಿತಿ ವೀರಪ್ಪ ಮೊಯ್ಲಿ ಅವರಿಗೆ ಅಭಿನಂದನೆ ಸಲ್ಲಿಸಿದರು.

ಮೈಸೂರಿನಲ್ಲಿ ನಡೆದ ಕಾರ್ಯಕ್ರಮದಲ್ಲಿ ಸುತ್ತೂರು ಮಠದ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳ ಸಾನ್ನಿಧ್ಯದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ನಿಕಟಪೂರ್ವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಉಪಸ್ಥಿತಿಯಲ್ಲಿ ಕೃತಿ ಲೋಕಾರ್ಪಣೆಗೊಂಡಿತು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ, ಡಾ. ವೀರಪ್ಪ ಮೊಯ್ಲಿ ಅವರು ವಿಶಿಷ್ಟ ವ್ಯಕ್ತಿತ್ವದ ರಾಜಕಾರಣಿ ಹಾಗೂ ಸಾಹಿತಿಯಾಗಿದ್ದು, ಶಾಸಕಾಂಗ, ನ್ಯಾಯಾಂಗ ಮತ್ತು ಸಾಹಿತ್ಯ ಕ್ಷೇತ್ರಗಳಲ್ಲಿ ಗಣನೀಯ ಸಾಧನೆ ಮಾಡಿದ್ದಾರೆ. ಜಾತಿಬಲ, ತೋಳ್ಬಲ ಹಾಗೂ ಹಣಬಲಗಳಿಲ್ಲದಿದ್ದರೂ ತಮ್ಮ ಪರಿಶ್ರಮ ಮತ್ತು ಸಾಮರ್ಥ್ಯದಿಂದ ರಾಜ್ಯದ ಮುಖ್ಯಮಂತ್ರಿಯಾದವರು ಎಂದು ಸ್ಮರಿಸಿದರು.

ಕಾನೂನು ವ್ಯಾಸಂಗ ಮಾಡಿ ಕಾರ್ಕಳದಲ್ಲಿ ವಕೀಲ ವೃತ್ತಿ ಆರಂಭಿಸಿದ ಅವರು ಮುಂದೆ ಕೇಂದ್ರದ ಕಾನೂನು ಸಚಿವರಾಗಿಯೂ ಸೇವೆ ಸಲ್ಲಿಸಿದ್ದಾರೆ. ರಾಜ್ಯದಲ್ಲಿ ಸಾಮಾನ್ಯ ಕುಟುಂಬಗಳ ವಿದ್ಯಾರ್ಥಿಗಳಿಗೂ ಇಂಜಿನಿಯರಿಂಗ್ ಮತ್ತು ವೈದ್ಯಕೀಯ ಶಿಕ್ಷಣ ಪಡೆಯಲು ಅವಕಾಶ ಕಲ್ಪಿಸುವ ನಿಟ್ಟಿನಲ್ಲಿ ಸಾಮಾನ್ಯ ಪ್ರವೇಶ ಪರೀಕ್ಷೆ (ಸಿಇಟಿ) ವ್ಯವಸ್ಥೆಯನ್ನು ಪರಿಚಯಿಸುವಲ್ಲಿ ಮಹತ್ವದ ಪಾತ್ರ ವಹಿಸಿದ್ದಾರೆ ಎಂದು ಹೇಳಿದರು.

ಕರ್ನಾಟಕ ಮತ್ತು ಭಾರತದ ಇತಿಹಾಸ, ಜನಜೀವನ ಹಾಗೂ ಸಂಸ್ಕೃತಿಯ ಕುರಿತು ಸಾಹಿತ್ಯ ರಚಿಸಿರುವ ವೀರಪ್ಪ ಮೊಯ್ಲಿ ಅವರು ಇದೀಗ ಜಾಗತಿಕ ಸಂಸ್ಕೃತಿಯ ಕುರಿತು ಗದ್ಯ ಮಹಾಕಾವ್ಯ ರಚಿಸಿರುವುದು ಕನ್ನಡಿಗರೆಲ್ಲರೂ ಹೆಮ್ಮೆಪಡುವ ಸಂಗತಿಯಾಗಿದೆ. ರಾಜಕೀಯ



ಚಟುವಟಿಕೆಗಳ ನಡುವೆಯೂ ಅವರು ಓದು ಮತ್ತು ಬರಹವನ್ನು ನಿರಂತರವಾಗಿ ಮುಂದುವರಿಸಿದ್ದಾರೆ. ಕಾದಂಬರಿ, ನಾಟಕ, ಕವನ ಸಂಕಲನಗಳ ಜೊತೆಗೆ ಎರಡು ಮಹಾಕಾವ್ಯಗಳನ್ನು ರಚಿಸಿರುವುದು ಅವರ ಸಾಹಿತ್ಯಾಸಕ್ತಿಗೆ ಸಾಕ್ಷಿಯಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಮೈಸೂರಿನ ನರಸಿಂಹರಾಜ ಕ್ಷೇತ್ರದ ಶಾಸಕ ತನ್ವೀರ್ ಸೇಠ್, ಮುಖ್ಯಮಂತ್ರಿಗಳ ಕಾನೂನು ಸಲಹೆಗಾರ ಹಾಗೂ ವಿರಾಜಪೇಟೆ ಶಾಸಕ ಎ.ಎಸ್. ಪೊನ್ನಣ್ಣ, ಕರ್ನಾಟಕ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಎಚ್.ಎಂ. ರೇವಣ್ಣ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ವಾಲ್ಮೀಕಿ ಪ್ರತಿಮೆಗೆ ಪುಷ್ಪಾರ್ಚನೆ ಸಲ್ಲಿಸಿ ಜಯಂತ್ಯೋತ್ಸವ ಉದ್ಘಾಟಿಸಿದ ಸಚಿವ ಕೆ.ಎಸ್. ಬಸವಂತಪ್ಪ

“ಮುಂಜಾನೆಯ ಮೆರಗು”

ದಾವಣಗೆರೆ ನ, 11– ಮಾಯಕೊಂಡ ವಿಧಾನಸಭಾ ಕ್ಷೇತ್ರದ ಹೂವಿನಮಡು ಗ್ರಾಮದಲ್ಲಿ ಆಯೋಜಿಸಿದ್ದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತ್ಯೋತ್ಸವ ಕಾರ್ಯಕ್ರಮದಲ್ಲಿ ಸಚಿವ ಕೆ.ಎಸ್. ಬಸವಂತಪ್ಪ ಭಾಗವಹಿಸಿ, ಮಹರ್ಷಿ ವಾಲ್ಮೀಕಿ ಅವರ ಪ್ರತಿಮೆಗೆ ಪುಷ್ಪಾರ್ಚನೆ ಸಲ್ಲಿಸುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿದರು.



ಈ ಸಂದರ್ಭದಲ್ಲಿ ರಾಜನಹಳ್ಳಿ ವಾಲ್ಮೀಕಿ ಗುರುಪೀಠದ ಪರಮಪೂಜ್ಯ ಶ್ರೀ ಶ್ರೀ ಪ್ರಸನ್ನಾನಂದಪುರಿ ಮಹಾಸ್ವಾಮಿಗಳು ದಿವ್ಯ ಸಾನ್ನಿಧ್ಯ ವಹಿಸಿದ್ದರು. ಸಚಿವ ಕೆ.ಎಸ್. ಬಸವಂತಪ್ಪ ಅವರು ಶ್ರೀಗಳ ಆಶೀರ್ವಾದ ಪಡೆದು ಗೌರವ ಸಲ್ಲಿಸಿದರು.

ಮಹರ್ಷಿ ವಾಲ್ಮೀಕಿ ಅವರ ಆದರ್ಶಗಳು, ಬೋಧನೆಗಳು ಹಾಗೂ ಜೀವನ ಸಂದೇಶಗಳು ಇಂದಿಗೂ ಸಮಾಜಕ್ಕೆ ದಾರಿದೀಪವಾಗಿವೆ. ಸಮಾನತೆ, ಸಾಮರಸ್ಯ ಮತ್ತು ಮಾನವೀಯ ಮೌಲ್ಯಗಳ ಆಧಾರದ ಮೇಲೆ ಸಮಾಜವನ್ನು ಕಟ್ಟುವಲ್ಲಿ ಅವರ ಚಿಂತನೆಗಳು ಇಂದಿನ ಪೀಳಿಗೆಗೂ ಸ್ಫೂರ್ತಿಯಾಗಿವೆ ಎಂಬ ಸಂದೇಶವನ್ನು ಕಾರ್ಯಕ್ರಮದಲ್ಲಿ ಸ್ಮರಿಸಲಾಯಿತು.

ಕಾರ್ಯಕ್ರಮದಲ್ಲಿ ಗ್ರಾಮದ ಮುಖಂಡರು, ಗಣ್ಯರು, ಸಮಾಜದ ಹಿರಿಯರು ಹಾಗೂ ಸಾರ್ವಜನಿಕರು ಭಾಗವಹಿಸಿ ಮಹರ್ಷಿ ವಾಲ್ಮೀಕಿ ಅವರಿಗೆ ಗೌರವ ನಮನ ಸಲ್ಲಿಸಿದರು.

2.50 ಕೋಟಿ ವೆಚ್ಚದ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ಸಂಸದೆ ಪ್ರಿಯಾಂಕಾ ಜಾರಕಿಹೊಳಿ ಚಾಲನೆ

“ಮುಂಜಾನೆಯ ಮೆರಗು”

ಅಥಣಿ ನ, 11– ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಅಥಣಿ ವಿಧಾನಸಭಾ ವ್ಯಾಪ್ತಿಯ ಕಕಮರಿ ಗ್ರಾಮದಲ್ಲಿ 2.50 ಕೋಟಿ ವೆಚ್ಚದ ಎರಡು ಪ್ರಮುಖ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ಸಂಸದೆ ಪ್ರಿಯಾಂಕಾ ಜಾರಕಿಹೊಳಿ ಚಾಲನೆ ನೀಡಿದರು.

ಶ್ರೀ ಸದ್ಗುರು ರಾಯಲಿಂಗೇಶ್ವರ ಮಠದ ಶ್ರೀ ಅಭಿನವ ಗುರುಲಿಂಗ ಜಂಗಮ ಮಹಾಸ್ವಾಮೀಜಿ ಅವರ ದಿವ್ಯ ಸಾನ್ನಿಧ್ಯದಲ್ಲಿ ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿಸಿ ಚಾಲನೆ ನೀಡಲಾಯಿತು.

ಲೋಕೋಪಯೋಗಿ ಇಲಾಖೆಯ (ಕಘಅ) ಅನುದಾನದಡಿ ಕೈಗೆತ್ತಿಕೊಳ್ಳಲಾಗಿರುವ ಈ ಯೋಜನೆಯಲ್ಲಿ 25 ಲಕ್ಷ ವೆಚ್ಚದಲ್ಲಿ ನಿಪ್ಪಾಣಿ–ಕೊಟ್ಟಲಗಿ



ರಸ್ತೆಯಿಂದ ಗುರುಲಿಂಗ ಮಹಾರಾಜರ ಮಠದವರೆಗೆ 190 ಮೀಟರ್ ಉದ್ದದ ಕೂಡು ರಸ್ತೆ ನಿರ್ಮಾಣ ಹಾಗೂ 2.25 ಕೋಟಿ ವೆಚ್ಚದಲ್ಲಿ ರಾಮ ವ್ಯಾಯಾ ಮಹಾರಾಜರ ತೋಟದ ರಸ್ತೆಯ 2.315 ಕಿ.ಮೀ.ನಿಂದ 4.60 ಕಿ.ಮೀ.ವರೆಗಿನ ರಸ್ತೆ ಸುಧಾರಣೆ ಮತ್ತು ಡಾಂಬರೀಕರಣ ಕಾಮಗಾರಿಗಳು ಸೇರಿವೆ.

ಈ ಕಾಮಗಾರಿಗಳು ಪೂರ್ಣಗೊಂಡ ಬಳಿಕ ಕಕಮರಿ ಗ್ರಾಮ ಸೇರಿದಂತೆ ಸುತ್ತಮುತ್ತಲಿನ ಪ್ರದೇಶಗಳ ಸಾರ್ವಜನಿಕರ ಸಂಚಾರಕ್ಕೆ ಅನುಕೂಲವಾಗಲಿದ್ದು, ರಸ್ತೆ ಸಂಪರ್ಕ ಮತ್ತಷ್ಟು ಸುಧಾರಿಸಲಿದೆ.

ಕಾರ್ಯಕ್ರಮದಲ್ಲಿ ಸ್ಥಳೀಯ ನಾಯಕರು, ಜನಪ್ರತಿನಿಧಿಗಳು, ಮುಖಂಡರು, ಹಿರಿಯರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು

ಕುಟುಂಬ ಸಮೇತ ಶ್ರೀ ಹಾಸನಾಂಬ ದೇವಿಯ ದರ್ಶನ ಪಡೆದ ಸಚಿವ ಟಿ. ರಘುಮೂರ್ತಿ

“ಮುಂಜಾನೆಯ ಮೆರಗು”

ಹಾಸನ ನ, 11– ಜಿಲ್ಲಾ ಪ್ರಸಿದ್ಧ ಧಾರ್ಮಿಕ ಕ್ಷೇತ್ರವಾದ ಶ್ರೀ ಹಾಸನಾಂಬ ದೇವಾಲಯಕ್ಕೆ ಸಚಿವ ಟಿ. ರಘುಮೂರ್ತಿ ಅವರು ಕುಟುಂಬ ಸಮೇತ ಭೇಟಿ ನೀಡಿ, ಶಕ್ತಿ ಸ್ವರೂಪಿಣಿ ಹಾಗೂ ನಾಡಿನ ಆರಾಧ್ಯ ದೇವತೆ ಶ್ರೀ ಹಾಸನಾಂಬ ದೇವಿಯ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು.



ಈ ಸಂದರ್ಭದಲ್ಲಿ ದೇವಿಯ ಸನ್ನಿಧಿಯಲ್ಲಿ ಭಕ್ತಿಭಾವದಿಂದ ಪ್ರಾರ್ಥನೆ ಸಲ್ಲಿಸಿದ ಸಚಿವರು, ನಾಡಿನ ಸಮಸ್ತ ಜನತೆಗೆ ಸುಖ, ಶಾಂತಿ, ನೆಮ್ಮದಿ, ಉತ್ತಮ ಆರೋಗ್ಯ ಹಾಗೂ ಸಮೃದ್ಧಿ ದೊರೆಯಲಿ ಎಂದು ದೇವಿಯಲ್ಲಿ ಬೇಡಿಕೊಂಡರು.

ಶ್ರೀ ಹಾಸನಾಂಬ ದೇವಿಯ ಕೃಪಾಶೀರ್ವಾದ ಸದಾ ಎಲ್ಲರ ಮೇಲಿರಲಿ. ನಾಡಿನ ಜನರ ಬದುಕಿನಲ್ಲಿ ಸಂತೋಷ, ಸೌಹಾರ್ದತೆ ಮತ್ತು ಸಮೃದ್ಧಿ ನೆಲೆಸಲಿ ಎಂದು ಸಚಿವ ಟಿ. ರಘುಮೂರ್ತಿ ಆಶಯ ವ್ಯಕ್ತಪಡಿಸಿದರು.

ದೇವಸ್ಥಾನ ನಿರ್ಮಾಣದ ಆಶಯ ವ್ಯಕ್ತಪಡಿಸಿದ ಗ್ರಾಮಸ್ಥರೊಂದಿಗೆ ಶಾಸಕರ ಸಮಾಲೋಚನೆ

“ಮುಂಜಾನೆಯ ಮೆರಗು”

ಕೂಡ್ಲಿಗಿ ನ, 11– ಕೂಡ್ಲಿಗಿ ವಿಧಾನಸಭಾ ಕ್ಷೇತ್ರದ ನೆಲಬೊಮ್ಮನಹಳ್ಳಿ ಗ್ರಾಮದ ದೇವಸ್ಥಾನ ನಿರ್ಮಾಣದ ಕುರಿತು ಗ್ರಾಮಸ್ಥರು ಶಾಸಕ ಡಾ. ಶ್ರೀನಿವಾಸ್ ಎನ್.ಟಿ. ಅವರನ್ನು ಭೇಟಿ ಮಾಡಿ ತಮ್ಮ ಬಹುದಿನಗಳ ಬೇಡಿಕೆ ಹಾಗೂ ಅಭಿಲಾಷೆಯನ್ನು ವ್ಯಕ್ತಪಡಿಸಿದರು.



ಈ ಸಂದರ್ಭದಲ್ಲಿ ಗ್ರಾಮದ ಧಾರ್ಮಿಕ ಶ್ರದ್ಧೆ, ಭಕ್ತಿ ಹಾಗೂ ದೇವಸ್ಥಾನ ನಿರ್ಮಾಣದ ಅಗತ್ಯದ ಕುರಿತು ಗ್ರಾಮಸ್ಥರು ಶಾಸಕರೊಂದಿಗೆ ಚರ್ಚಿಸಿದರು.

ಗ್ರಾಮಸ್ಥರ ಆಶಯಗಳನ್ನು ಆಲಿಸಿದ ಶಾಸಕರು, ಅವರೊಂದಿಗೆ ದೇವಸ್ಥಾನ ನಿರ್ಮಾಣದ ಉದ್ದೇಶ ಹಾಗೂ ಗ್ರಾಮದ ಧಾರ್ಮಿಕ ಅಭಿಲಾಷೆಗಳ ಕುರಿತು ಸಮಾಲೋಚನೆ ನಡೆಸಿದರು.

ಗ್ರಾಮದ ಭಕ್ತಿಭಾವಕ್ಕೆ ದೇಗುಲದ ರೂಪ ನೀಡುವ ಉದ್ದೇಶದಿಂದ ನಡೆದ ಈ ಭೇಟಿಯಲ್ಲಿ ಗ್ರಾಮದ ಮುಖಂಡರು, ಹಿರಿಯರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ವೀರಪುರ ಹಿರೇಮಠದಲ್ಲಿ ನೂತನ ಶಿಲಾಮಠ ಉದ್ಘಾಟನೆ: ಸಂಸದ ಬಿ.ವೈ. ರಾಘವೇಂದ್ರ

“ಮುಂಜಾನೆಯ ಮೆರಗು”

ಸಾಗರ ನ, 11– ತಾಲ್ಲೂಕಿನ ಶ್ರೀ ವೀರಪುರ ಹಿರೇಮಠದಲ್ಲಿ ಚಳ್ಳಹಿರಿಯೂರು ಹಿರೇಮಠದ ಪರಂಪರಾಗತ ವೀರಪುರ ಹಿರೇಮಠದ ಲಿಂ. ಶ್ರೀ ಚನ್ನವೀರದೇಶಿಕೇಂದ್ರ ಶಿವಾಚಾರ್ಯರ ಕರ್ತೃಗದ್ದುಗೆಯ ನೂತನ ಶಿಲಾಮಠದ ಉದ್ಘಾಟನಾ ಸಮಾರಂಭ ಧಾರ್ಮಿಕ ಶ್ರದ್ಧಾಭಕ್ತಿಯಿಂದ ನೆರವೇರಿತು.

ಕಾರ್ಯಕ್ರಮದಲ್ಲಿ ಶಿವಮೊಗ್ಗ ಲೋಕಸಭಾ ಕ್ಷೇತ್ರದ ಸಂಸದ ಬಿ.ವೈ. ರಾಘವೇಂದ್ರ ಅವರು ಭಾಗವಹಿಸಿ, ಪೂಜ್ಯರ ಕರ್ತೃಗದ್ದುಗೆಯ ದರ್ಶನ ಪಡೆದು ಆಶೀರ್ವಾದ ಪಡೆದರು.

ಶ್ರೇಷ್ಠಲ ಪೀಠದ ಶ್ರೀಮದಗಿರಿರಾಜ ಸೂರ್ಯ ಸಿಂಹಾಸನಾಧೀಶ್ವರ ಡಾ. ಚನ್ನಸಿದ್ಧರಾಮ ಪಂಡಿತರಾಧ್ಯ ಭಗವತ್ಪಾದರು ಹಾಗೂ ವೀರಪುರ ಹಿರೇಮಠದ ಶ್ರೀ ಮುರುಘರಾಜೇಂದ್ರ ಪಂಡಿತರಾಧ್ಯ ಶಿವಾಚಾರ್ಯರ ದಿವ್ಯ ಸಾನ್ನಿಧ್ಯದಲ್ಲಿ ಕಾರ್ಯಕ್ರಮ ನಡೆಯಿತು. ಎಡೆಯೂರು, ಕೋಣಂದೂರು, ಮೂಡಿಗೆರೆ ಹಾಗೂ ಕೈಸನೂರು ಮಠಗಳ ಶ್ರೀಗಳು ಉಪಸ್ಥಿತರಿದ್ದು ಭಕ್ತರಿಗೆ ಆಶೀರ್ವಚನ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಗಣ್ಯರು, ಧಾರ್ಮಿಕ ಹಾಗೂ ಆಧ್ಯಾತ್ಮಿಕ ಚಿಂತನೆಗಳನ್ನು ಸಮಾಜದಲ್ಲಿ ಬಿತ್ತುವ ಮಠಮಾನ್ಯಗಳು ನಾಡಿನ ಸಾಂಸ್ಕೃತಿಕ ಪರಂಪರೆಯ ಪ್ರಮುಖ ಕೇಂದ್ರಗಳಾಗಿವೆ. ಇಂತಹ ಪವಿತ್ರ ಶಕ್ತಿಪೀಠಗಳ ಅಭಿವೃದ್ಧಿ ಹಾಗೂ ಸಂರಕ್ಷಣೆಗೆ ಹೆಚ್ಚಿನ ಆದ್ಯತೆ ನೀಡಬೇಕಿದೆ ಎಂದು ಅಭಿಪ್ರಾಯಪಟ್ಟರು.

ಶ್ರೀಮಠದ ಆಶೀರ್ವಾದ ಸಮಸ್ತ ಜನತೆಗೆ ದೊರೆಯಲಿ ಹಾಗೂ ನಾಡಿನಲ್ಲಿ ಶಾಂತಿ, ಸೌಹಾರ್ದತೆ ಮತ್ತು ಸಮೃದ್ಧಿ



ನೆಲೆಸಲಿ ಎಂದು ಪ್ರಾರ್ಥಿಸಲಾಯಿತು.

ಸಚಿವರಾದ ಲಕ್ಷ್ಮಣ ಸವದಿ, ರುದ್ರಪ್ಪ ಲಮಾಣಿ, ಶಾಸಕ ಹಾಗೂ ಕೈಗಾರಿಕಾ ಸಮಿತಿ ಅಧ್ಯಕ್ಷ ಗೋಪಾಲಕೃಷ್ಣ ಬೇಳೂರು, ಬಾಗಲಕೋಟೆ ಸಂಸದ ಗದ್ದಿಗೌಡರ, ಮಾಜಿ ಶಾಸಕರಾದ ಹರತಾಳು ಹಾಲಪ್ಪ, ಕಳಕಪ್ಪ ಬಂಡಿ, ಉಪೇಂದ್ರ ಬಣಕಾರ್, ಮಾಜಿ ಸಚಿವ ಸಿ.ಸಿ. ಪಾಟೀಲ್, ಕೆಎಸ್‌ಇಐಡಿಸಿ ಅಧ್ಯಕ್ಷ ನಂಜಪ್ಪಕುಮಾರ್, ಡಿಸಿಸಿ ಬ್ಯಾಂಕ್ ಅಧ್ಯಕ್ಷ ಮಂಜುನಾಥಗೌಡ, ಪ್ರತೀಪ್‌ಗೌಡ ಪಾಟೀಲ್, ನಾದಗೌಡ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಕುಕ್ಕುವಾಡೇಶ್ವರಿ ಅಮ್ಮನವರ ದೇವಸ್ಥಾನದ ಅಭಿವೃದ್ಧಿ ಕಾಮಗಾರಿ ಪರಿಶೀಲಿಸಿದ ಸಚಿವ ಬಸವಂತಪ್ಪ

“ಮುಂಜಾನೆಯ ಮೆರಗು”

ದಾವಣಗೆರೆ ನ, 11– ಮಾಯಕೊಂಡ ವಿಧಾನಸಭಾ ಕ್ಷೇತ್ರದ ಗೋಣಿವಾಡ ಕ್ಯಾಂಪ್‌ಗೆ ಸಚಿವ ಕೆ.ಎಸ್. ಬಸವಂತಪ್ಪ ಅವರು ಭೇಟಿ ನೀಡಿ, ಗ್ರಾಮದಲ್ಲಿ ಪ್ರಗತಿಯಲ್ಲಿರುವ ಶ್ರೀ ಕುಕ್ಕುವಾಡೇಶ್ವರಿ ಅಮ್ಮನವರ ದೇವಸ್ಥಾನದ ಅಭಿವೃದ್ಧಿ ಕಾಮಗಾರಿಯನ್ನು ಪರಿಶೀಲಿಸಿದರು.



ದೇವಸ್ಥಾನದ ಅಭಿವೃದ್ಧಿ ಕಾಮಗಾರಿಯ ಪ್ರಗತಿ ಹಾಗೂ ನಿರ್ಮಾಣದ ಗುಣಮಟ್ಟದ ಕುರಿತು ಸಂಬಂಧಪಟ್ಟ ಅಧ

ಘಟಪ್ರಭಾ ಎಡದಂಡೆ ಕಾಲುವೆ ನೀರಿನ ಹರಿವು ಪರಿಶೀಲಿಸಿದ ಸಂಸದೆ ಪ್ರಿಯಾಂಕಾ ಜಾರಕಿಹೊಳಿ

"ಮುಂಜಾನೆಯ ಮೆರಗು"

ಅಥಣಿ, ನ.11– ಅಥಣಿಗೆ ತೆರಳುವ ಮಾರ್ಗಮಧ್ಯೆ ಸಂಸದೆ ಪ್ರಿಯಾಂಕಾ ಜಾರಕಿಹೊಳಿ ಅವರು ಮುಗಳಖೋಡ ಸೇರಿದಂತೆ ವಿವಿಧ ಸ್ಥಳಗಳಲ್ಲಿ ಘಟಪ್ರಭಾ ಎಡದಂಡೆ ಕಾಲುವೆಯ ನೀರಿನ ಹರಿವನ್ನು ಪರಿಶೀಲಿಸಿದರು.



ಈ ಸಂದರ್ಭದಲ್ಲಿ ಹಿಡಕಲ್ ಜಲಾಶಯದಿಂದ ಕುಡಿಯುವ ನೀರಿನ ಉದ್ದೇಶಕ್ಕಾಗಿ ಕಾಲುವೆಗೆ ನೀರು ಬಿಡುಗಡೆ ಮಾಡಲಾಗುತ್ತಿದ್ದು, ನೀರಿನ ಹರಿವು ಮತ್ತು ವಿತರಣೆಯ ಸ್ಥಿತಿಗತಿಗಳ ಕುರಿತು ಪರಿಶೀಲನೆ ನಡೆಸಿದರು.

ಕುಡಿಯುವ ನೀರಿನ ಅಗತ್ಯವನ್ನು ಗಮನದಲ್ಲಿಟ್ಟುಕೊಂಡು ಸಾರ್ವಜನಿಕರು ಹಾಗೂ ರೈತರು ನೀರನ್ನು ಮಿತವಾಗಿ ಮತ್ತು ಸಮರ್ಪಕವಾಗಿ ಬಳಸಿಕೊಳ್ಳಬೇಕು. ಕಾಲುವೆಯ ಮೇಲ್ಭಾಗದ ಪ್ರದೇಶಗಳಲ್ಲಿ ನೀರಿನ ಅನಗತ್ಯ ಬಳಕೆ ಮಾಡದೆ, ಕೆಳಹಂತದ ಗ್ರಾಮಗಳ ಜನರಿಗೂ ಸಮರ್ಪಕವಾಗಿ ನೀರು ತಲುಪುವಂತೆ ಎಲ್ಲರೂ ಸಹಕರಿಸಬೇಕು ಎಂದು ಸಂಸದೆ ಪ್ರಿಯಾಂಕಾ ಜಾರಕಿಹೊಳಿ ಮನವಿ ಮಾಡಿದರು.

ಜಲಸಂಪನ್ಮೂಲದ ಸದ್ಬಳಕೆ ಹಾಗೂ ಎಲ್ಲ ಪ್ರದೇಶಗಳಿಗೂ ಸಮಾನವಾಗಿ ನೀರು ತಲುಪಿಸುವ ನಿಟ್ಟಿನಲ್ಲಿ ಸಾರ್ವಜನಿಕರ ಸಹಕಾರ ಅತ್ಯಗತ್ಯವಾಗಿದೆ ಎಂದು ಅವರು ತಿಳಿಸಿದರು.

ವೀರಪ್ಪ ಮೊಯಿಲಿ ಅವರ 'ವಿಶ್ವಸಂಸ್ಕೃತಿಯ ಮಹಾಯಾನ' ನಾಲ್ಕನೇ ಸಂಪುಟ ಲೋಕಾರ್ಪಣೆ

"ಮುಂಜಾನೆಯ ಮೆರಗು"

ಮೈಸೂರು ನ, 11– ಮಾಜಿ ಮುಖ್ಯಮಂತ್ರಿ ಹಾಗೂ ಸರಸ್ವತಿ ಸಮ್ಮಾನ್ ಪ್ರಶಸ್ತಿ ಪುರಸ್ಕೃತ ಸಾಹಿತಿ ಡಾ. ಎಂ. ವೀರಪ್ಪ ಮೊಯಿಲಿ ಅವರ ಸಾಹಿತ್ಯಿಕ ಕೃತಿಯಾದ 'ವಿಶ್ವಸಂಸ್ಕೃತಿಯ ಮಹಾಯಾನ' ನಾಲ್ಕನೇ ಸಂಪುಟದ ಗದ್ಯ ಮಹಾಕಾವ್ಯವನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಮೈಸೂರಿನಲ್ಲಿ ನಡೆದ ಸಮಾರಂಭದಲ್ಲಿ ಇಂದು ಲೋಕಾರ್ಪಣೆ ಮಾಡಿದರು.



ಸಾಹಿತ್ಯ ಮತ್ತು ಸಾಂಸ್ಕೃತಿಕ ಕ್ಷೇತ್ರದಲ್ಲಿ ಮಹತ್ವದ ಕೃತಿಯಾಗಿ ಗುರುತಿಸಿಕೊಂಡಿರುವ 'ವಿಶ್ವಸಂಸ್ಕೃತಿಯ ಮಹಾಯಾನ' ಕೃತಿಯ ನಾಲ್ಕನೇ ಸಂಪುಟದ ಬಿಡುಗಡೆ ಸಮಾರಂಭದಲ್ಲಿ ಸುತ್ತೂರು ಮಠದ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು ದಿವ್ಯ ಸಾನ್ನಿಧ್ಯ ವಹಿಸಿದ್ದರು.

ಈ ಸಂದರ್ಭದಲ್ಲಿ ಮಾಜಿ ಮುಖ್ಯಮಂತ್ರಿ ಹಾಗೂ ಕೃತಿಯ ರಚನಕಾರ ಡಾ. ಎಂ. ವೀರಪ್ಪ ಮೊಯಿಲಿ, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಎಚ್.ಎಂ. ರೇವಣ್ಣ, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಎ.ಎಸ್. ಪೊನ್ನಣ್ಣ ಸೇರಿದಂತೆ ಶಾಸಕರು, ಜನಪ್ರತಿನಿಧಿಗಳು ಹಾಗೂ ವಿವಿಧ ಕ್ಷೇತ್ರಗಳ ಗಣ್ಯರು ಉಪಸ್ಥಿತರಿದ್ದರು.


ಕಾರ್ಯಕ್ರಮದಲ್ಲಿ ಸಾಹಿತಿ ವೀರಪ್ಪ ಮೊಯಿಲಿ ಅವರ ಸಾಹಿತ್ಯಿಕ ಸಾಧನೆ ಹಾಗೂ ಕೃತಿಯ ಮಹತ್ವಕ್ಕೆ ಸಾಕ್ಷಿಯಾದ ಗಣ್ಯರ ಉಪಸ್ಥಿತಿಯಲ್ಲಿ ಸಂಪುಟವನ್ನು ಅಧಿಕೃತವಾಗಿ ಬಿಡುಗಡೆಗೊಳಿಸಲಾಯಿತು.



ಸೋನಿಯಾ ಗಾಂಧಿ ಅವರ 'ಬಿಲಾಂಗಿಂಗ್: ಎ ಜರ್ನಿ ಆಫ್ ಲವ್' ಕೃತಿ ಓದುತ್ತಿರುವ ಸಚಿವ ಟಿ. ರಘುಮೂರ್ತಿ

"ಮುಂಜಾನೆಯ ಮೆರಗು"

ಬೆಂಗಳೂರು ನ, 11– ಕಾಂಗ್ರೆಸ್ ನಾಯಕಿ ಹಾಗೂ ಹಿರಿಯ ರಾಜಕಾರಣಿ ಸೋನಿಯಾ ಗಾಂಧಿ ಅವರ ಆತ್ಮಕಥನದ ಪ್ರತಿಯನ್ನು ಸ್ವೀಕರಿಸಿರುವ ಸಚಿವ ಟಿ. ರಘುಮೂರ್ತಿ ಅವರು, 'ಬಿಲಾಂಗಿಂಗ್: ಎ ಜರ್ನಿ ಆಫ್ ಲವ್' ಕೃತಿಯ ಓದನ್ನು ಆರಂಭಿಸಿದ್ದು, ಪುಸ್ತಕದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.



ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ತಮ್ಮ ಅಭಿಪ್ರಾಯ ಹಂಚಿಕೊಂಡಿರುವ ಅವರು, ಸಂಬಂಧಗಳು, ಜೀವನ ಮೌಲ್ಯಗಳು ಹಾಗೂ ಸಾರ್ವಜನಿಕ ಸೇವೆಯ ಅನುಭವಗಳು ಮಿಳಿತಗೊಂಡಿರುವ ಈ ಕೃತಿ ವಿಶೇಷ ಒಳನೋಟಗಳನ್ನು ಒಳಗೊಂಡಿದೆ ಎಂದು ತಿಳಿಸಿದ್ದಾರೆ.

ಕೃತಿಯ ಕೆಲವೇ ಪುಟಗಳನ್ನು ಓದಿದಾಗಲೇ ಅದರಲ್ಲಿರುವ ಆಳವಾದ ವಿಚಾರಗಳು ಮತ್ತು ಆತ್ಮೀಯ ನಿರೂಪಣೆ ಗಮನ ಸೆಳೆದಿವೆ. ಭಾರತದ ಪ್ರತಿಷ್ಠಿತ ರಾಜಕೀಯ ಕುಟುಂಬದೊಂದಿಗಿನ ತಮ್ಮ ಒಡನಾಟ, ಪತಿ ಹಾಗೂ ಮಾಜಿ ಪ್ರಧಾನಿ ರಾಜೀವ್ ಗಾಂಧಿ ಅವರೊಂದಿಗಿನ ಜೀವನಾನುಭವಗಳು ಮತ್ತು ನಂತರದ ಬದುಕಿನ ವಿವಿಧ ಮಜಲುಗಳನ್ನು ಸೋನಿಯಾ ಗಾಂಧಿ ಅವರು ಈ ಕೃತಿಯಲ್ಲಿ ವಿವರಿಸಿದ್ದಾರೆ ಎಂದು ಹೇಳಿದ್ದಾರೆ.

ಆತ್ಮೀಯತೆ ಮತ್ತು ಪ್ರಾಮಾಣಿಕತೆಯಿಂದ ಕೂಡಿರುವ ಈ ಕೃತಿ ಜೀವನದ ಮೌಲ್ಯಗಳು, ಮಾನವ ಸಂಬಂಧಗಳು ಹಾಗೂ ಸಾರ್ವಜನಿಕ ಸೇವೆಯ ಕುರಿತು ಹೊಸ ದೃಷ್ಟಿಕೋನ ನೀಡುತ್ತದೆ. ಎಲ್ಲರೂ ಈ ಪುಸ್ತಕವನ್ನು ಓದುವ ಮೂಲಕ ಅದರಲ್ಲಿರುವ ಅನುಭವಗಳು ಮತ್ತು ಜೀವನ ಪಾಠಗಳನ್ನು ಅರಿತುಕೊಳ್ಳಬೇಕು. ಕೃತಿಯನ್ನು ಆದಷ್ಟು ಬೇಗ ಪೂರ್ಣಗೊಳಿಸುವ ಕಾತರದಲ್ಲಿರುವುದಾಗಿ ಸಚಿವ ಟಿ. ರಘುಮೂರ್ತಿ ತಮ್ಮ ಅಭಿಪ್ರಾಯದಲ್ಲಿ ತಿಳಿಸಿದ್ದಾರೆ.

ಜನಸಾಮಾನ್ಯರ ಮೇಲೆ ಆರ್ಥಿಕ ಹೊರೆ ಹೇರುತ್ತಿರುವ ಕಾಂಗ್ರೆಸ್ ಸರ್ಕಾರದ ವಿರುದ್ಧ ಬಿ.ಎಸ್.ಯಡಿಯೂರಪ್ಪ ಸೇರಿದಂತೆ ಬಿಜೆಪಿ ನಾಯಕರ ಆಕ್ರೋಶ

"ಮುಂಜಾನೆಯ ಮೆರಗು"

ಬೆಂಗಳೂರು ನ, 11– ಅಗತ್ಯ ವಸ್ತುಗಳು ಹಾಗೂ ಸೇವೆಗಳ ನಿರಂತರ ಬೆಲೆ ಏರಿಕೆಯಿಂದ ತತ್ತರಿಸಿರುವ ಜನಸಾಮಾನ್ಯರ ಪರವಾಗಿ ಕಾಂಗ್ರೆಸ್ ಸರ್ಕಾರದ ವಿರುದ್ಧ ಬಿಜೆಪಿ ವತಿಯಿಂದ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಯಿತು.

ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ಮಾಜಿ ಮುಖ್ಯಮಂತ್ರಿಗಳಾದ ಬಸವರಾಜ ಬೊಮ್ಮಾಯಿ, ಜಗದೀಶ್ ಶೆಟ್ಟರ್ ಸೇರಿದಂತೆ ಪಕ್ಷದ ಪ್ರಮುಖ ನಾಯಕರು ಭಾಗವಹಿಸಿ ಸರ್ಕಾರದ ಬೆಲೆ ಏರಿಕೆ ನೀತಿಯನ್ನು ಖಂಡಿಸಿದರು.

ಹಾಲು, ಮೊಸರು, ಬಸ್ ಪ್ರಯಾಣ ದರ ಸೇರಿದಂತೆ ದಿನನಿತ್ಯದ ಅಗತ್ಯ ವಸ್ತುಗಳು ಹಾಗೂ ಸೇವೆಗಳ ಬೆಲೆ ಹೆಚ್ಚಳದಿಂದ ಜನಸಾಮಾನ್ಯರು ತೀವ್ರ ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದಾರೆ. ಈಗಾಗಲೇ ಜೀವನ ನಿರ್ವಹಣೆ ಕಷ್ಟಕರವಾಗಿರುವ ಸಂದರ್ಭದಲ್ಲಿ ಜನರ ಮೇಲಿನ ಹೊರೆ ತಗ್ಗಿಸುವ ಬದಲು ಒಂದರ ಮೇಲೊಂದು ಬೆಲೆ ಏರಿಕೆ ಮಾಡುತ್ತಿರುವ ಸರ್ಕಾರದ ಕ್ರಮ ಜನವಿರೋಧಿಯಾಗಿದೆ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.



ವಿರೋಧ ಪಕ್ಷದ ನಾಯಕ ಆರ್. ಅಶೋಕ್, ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ವಿಧಾನ ಪರಿಷತ್ ಸದಸ್ಯ ಎನ್. ರವಿಕುಮಾರ್, ಮಾಜಿ ಸಚಿವರಾದ ಗೋವಿಂದ ಕಾರಜೋಳ, ಬಿ. ಶ್ರೀರಾಮುಲು, ಅಶ್ವತ್ಥ್ ನಾರಾಯಣ, ಪ್ರಮೋದ್ ಮಧ್ವರಾಜ್ ಸೇರಿದಂತೆ ಪಕ್ಷದ ಕೋರ್ ಕಮಿಟಿ ಸದಸ್ಯರು, ಸಂಸದರು, ಶಾಸಕರು, ವಿಧಾನ ಪರಿಷತ್ ಸದಸ್ಯರು, ಪದಾಧಿಕಾರಿಗಳು, ಜಿಲ್ಲಾಧ್ಯಕ್ಷರು ಹಾಗೂ ಸಾವಿರಾರು ಕಾರ್ಯಕರ್ತರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಬೆಲೆ ಏರಿಕೆಗೆ ಕಡಿವಾಣ ಹಾಕಿ ಜನಸಾಮಾನ್ಯರಿಗೆ ಆರ್ಥಿಕ ನೆಮ್ಮದಿ ಕಲ್ಪಿಸಬೇಕು. ಜನರ ಸಮಸ್ಯೆಗಳಿಗೆ ಸ್ಪಂದಿಸಿ ಜನಪರ ಆಡಳಿತ ನೀಡಬೇಕು ಎಂದು ಪ್ರತಿಭಟನಾಕಾರರು ರಾಜ್ಯ ಸರ್ಕಾರವನ್ನು ಒತ್ತಾಯಿಸಿದರು. ಜನರ ಪರವಾಗಿ ಬಿಜೆಪಿಯ ಹೋರಾಟ ಸದನದ ಒಳಗೂ ಹೊರಗೂ ನಿರಂತರವಾಗಿ ಮುಂದುವರಿಯಲಿದೆ ಎಂದು ಮುಖಂಡರು ಎಚ್ಚರಿಸಿದರು.

ಅಭಿವೃದ್ಧಿ ಕಾಮಗಾರಿಗಳ ಪ್ರಗತಿ, ಸಾರ್ವಜನಿಕರ ಕುಂದುಕೊರತೆಗಳ ಪರಿಹಾರಕ್ಕೆ ಶಾಸಕ ಬಸವರಾಜ ಶಿವಗಂಗಾ ಒತ್ತು

"ಮುಂಜಾನೆಯ ಮೆರಗು"

ಚನ್ನಗಿರಿ ನ, 11– ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಕೈಗೊಳ್ಳಲಾಗುತ್ತಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳು ಹಾಗೂ ಸಾರ್ವಜನಿಕರ ಸಮಸ್ಯೆಗಳ ಕುರಿತು ಶಾಸಕ ಬಸವರಾಜ ಶಿವಗಂಗಾ ಅವರು ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಕುಮಾರಿ ಸಾಹಿತ್ಯ ಎಂ. ಆಲದಕಟ್ಟಿ ಅವರನ್ನು ಭೇಟಿ ಮಾಡಿ ಚರ್ಚಿಸಿದರು.

ಜಿಲ್ಲಾ ಪಂಚಾಯಿತಿ ಕಚೇರಿಯಲ್ಲಿ ನಡೆದ ಸಭೆಯಲ್ಲಿ ಕೆ.ಆರ್.ಐ.ಡಿ.ಎಲ್. (KRIDL) ಅಧಿಕಾರಿಗಳು ಉಪಸ್ಥಿತರಿದ್ದು, ಕ್ಷೇತ್ರದ ವಿವಿಧ ಭಾಗಗಳಲ್ಲಿ ನಡೆಯುತ್ತಿರುವ ಅಭಿವೃದ್ಧಿ ಕಾಮಗಾರಿಗಳ ಪ್ರಗತಿ, ಕಾಮಗಾರಿಗಳ ಅನುಷ್ಠಾನ ಹಾಗೂ ಸಾರ್ವಜನಿಕರಿಂದ ಬಂದಿರುವ ಕುಂದುಕೊರತೆಗಳ ಕುರಿತು ಸಮಗ್ರವಾಗಿ ಚರ್ಚಿಸಲಾಯಿತು.



ಕ್ಷೇತ್ರದ ಅಭಿವೃದ್ಧಿ ಕಾಮಗಾರಿಗಳು ಗುಣಮಟ್ಟದಿಂದ ಹಾಗೂ ನಿಗದಿತ ಕಾಲಮಿತಿಯೊಳಗೆ ಪೂರ್ಣಗೊಳ್ಳಬೇಕು. ಸಾರ್ವಜನಿಕರು ಎದುರಿಸುತ್ತಿರುವ ಸಮಸ್ಯೆಗಳಿಗೆ ಅಧಿಕಾರಿಗಳು ತ್ವರಿತವಾಗಿ ಸ್ಪಂದಿಸಿ ಸೂಕ್ತ ಪರಿಹಾರ ಕಲ್ಪಿಸಬೇಕು ಎಂದು ಶಾಸಕ ಬಸವರಾಜ ಶಿವಗಂಗಾ ಅವರು ತಿಳಿಸಿದರು.

ಜನರ ಸಮಸ್ಯೆಗಳಿಗೆ ಸ್ಪಂದಿಸುವುದು ಮತ್ತು ಅವುಗಳಿಗೆ ಶಾಶ್ವತ ಪರಿಹಾರ ಒದಗಿಸುವುದು ತಮ್ಮ ಆದ್ಯ ಕರ್ತವ್ಯವಾಗಿದ್ದು, ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ನಿರಂತರವಾಗಿ ಶ್ರಮಿಸುವುದಾಗಿ ಅವರು ಹೇಳಿದರು.

ಮಹಿಳೆಯರು ಶಿಕ್ಷಣದ ಮೂಲಕ ಸ್ವಾವಲಂಬಿಗಳಾಗಿ ಉನ್ನತ ಸಾಧನೆ ಮಾಡಬೇಕು: ಸಚಿವ ಕೆ.ಎಚ್.ಮುನಿಯಪ್ಪ

"ಮುಂಜಾನೆಯ ಮೆರಗು"

ದೇವನಹಳ್ಳಿ ನ, 11– ಚಿತ್ರದುರ್ಗದ ಕೋಟೆ ಹಾಗೂ ನಾಡಿನ ಸ್ವಾಭಿಮಾನ ರಕ್ಷಣೆಗಾಗಿ ಪ್ರಾಣವನ್ನೇ ಪಣಕ್ಕಿಟ್ಟು ಹೋರಾಡಿದ ವೀರವನಿತೆ ಒನಕೆ ಓಬವ್ವ ಅವರ ಧೈರ್ಯ, ಸಾಹಸ ಮತ್ತು ದೇಶಪ್ರೇಮ ಇಂದಿನ ಯುವತಿಯರಿಗೆ ಸದಾ ಸ್ಫೂರ್ತಿಯಾಗಬೇಕು ಎಂದು ಸಚಿವ ಕೆ.ಎಚ್.ಮುನಿಯಪ್ಪ ಹೇಳಿದರು.

ದೇವನಹಳ್ಳಿಯ ಬೀರಸಂದ್ರದಲ್ಲಿರುವ ಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಆಯೋಜಿಸಿದ್ದ ವೀರವನಿತೆ ಒನಕೆ ಓಬವ್ವ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿ, ಓಬವ್ವ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

ಸಾಮಾನ್ಯ ಕುಟುಂಬದಲ್ಲಿ ಜನಿಸಿದ ಒನಕೆ ಓಬವ್ವ ಅವರು ತಮ್ಮ ಅಪ್ರತಿಮ ಸಾಹಸ ಮತ್ತು ಸಮಯಪ್ರಜ್ಞೆಯಿಂದ ಚಿತ್ರದುರ್ಗದ ಕೋಟೆಯನ್ನು ರಕ್ಷಿಸಿ ಇತಿಹಾಸದಲ್ಲಿ ಅಜರಾಮರರಾಗಿದ್ದಾರೆ. ಅವರ ಶೌರ್ಯಗಾಥೆ ಮಹಿಳಾ ಶಕ್ತಿಯ ಪ್ರತೀಕವಾಗಿದ್ದು, ಪ್ರತಿಯೊಬ್ಬರೂ ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.



ಹೆಣ್ಣುಮಕ್ಕಳು ಯಾವುದೇ ಸವಾಲುಗಳಿಗೂ ಎದೆಗುಂದದೆ ಧೈರ್ಯ, ಆತ್ಮವಿಶ್ವಾಸ ಮತ್ತು ಸ್ವಾಭಿಮಾನದಿಂದ ಬದುಕಬೇಕು. ಗುಣಮಟ್ಟದ ಶಿಕ್ಷಣ ಪಡೆದು ವೈದ್ಯರು, ಎಂಜಿನಿಯರ್‌ಗಳು, ವಿಜ್ಞಾನಿಗಳು ಹಾಗೂ ಐಎಎಸ್, ಕೆಎಎಸ್ ಅಧಿಕಾರಿಗಳಾಗಿ ಉನ್ನತ ಸ್ಥಾನಗಳನ್ನು ಅಲಂಕರಿಸಬೇಕು. ಮಹಿಳೆಯರ ಸ್ವಾವಲಂಬನೆ ಮತ್ತು ಸಬಲೀಕರಣಕ್ಕೆ ಶಿಕ್ಷಣವೇ ಅತ್ಯಂತ ಬಲವಾದ ಅಡಿಪಾಯವಾಗಿದೆ ಎಂದು ತಿಳಿಸಿದರು.

ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರು ಮಹಿಳೆಯರ ಸಮಾನ ಹಕ್ಕುಗಳು, ಸಾಮಾಜಿಕ ನ್ಯಾಯ ಹಾಗೂ ಸಮಾನತೆಯ ಸಮಾಜ ನಿರ್ಮಾಣಕ್ಕೆ ಮಹತ್ವದ ಕೊಡುಗೆ ನೀಡಿದ್ದಾರೆ. ಅವರ ಸಂವಿಧಾನಿಕ ಆಶಯಗಳನ್ನು ಸಾಕಾರಗೊಳಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದರು.

ಮಹಿಳೆಯರಿಗೆ ರಾಜಕೀಯ ಸೇರಿದಂತೆ ಎಲ್ಲ ಕ್ಷೇತ್ರಗಳಲ್ಲೂ ಸಮಾನ ಪ್ರಾತಿನಿಧ್ಯ ದೊರೆಯಬೇಕು. ಮಹಿಳಾ ಮೀಸಲಾತಿ ಮಸೂದೆಯನ್ನು ಪ್ರತ್ಯೇಕವಾಗಿ ಜಾರಿಗೊಳಿಸಿ ಶೇ.33ರಷ್ಟು ರಾಜಕೀಯ ಪ್ರಾತಿನಿಧ್ಯ ಕಲ್ಪಿಸುವ ನಿಟ್ಟಿನಲ್ಲಿ ಸೋನಿಯಾ ಗಾಂಧಿ ಅವರ ಪ್ರಯತ್ನಗಳನ್ನು ಸ್ಮರಿಸಿದ ಅವರು, ಮಹಿಳಾ ಮೀಸಲಾತಿ ಅನುಷ್ಠಾನದಲ್ಲಿ ವಿಳಂಬವಾಗಬಾರದು ಹಾಗೂ ದಕ್ಷಿಣ ರಾಜ್ಯಗಳಿಗೆ ಅನ್ಯಾಯವಾಗಬಾರದು ಎಂಬುದು ಕಾಂಗ್ರೆಸ್ ಪಕ್ಷದ ಸ್ಪಷ್ಟ ನಿಲುವಾಗಿದೆ ಎಂದು ಹೇಳಿದರು.



ಇದೇ ವೇಳೆ ಸಮಾಜ ಕಲ್ಯಾಣ ಇಲಾಖೆಯ ವಸತಿ ಶಾಲೆಗಳು ಬಡ ಮತ್ತು ಹಿಂದುಳಿದ ವರ್ಗಗಳ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಹಾಗೂ ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಅವಕಾಶ ಕಲ್ಪಿಸುತ್ತಿವೆ. ಪ್ರತಿಯೊಂದು ಮಗುವಿಗೂ ಸಮಾನ ಶಿಕ್ಷಣದ ಅವಕಾಶ ದೊರೆಯಬೇಕು ಎಂದು ಆಶಯ ವ್ಯಕ್ತಪಡಿಸಿದರು.

ಒನಕೆ ಓಬವ್ವ ಅವರ ಶೌರ್ಯ, ಡಾ.ಬಿ.ಆರ್.ಅಂಬೇಡ್ಕರ್ ಅವರ ಸಮಾನತೆಯ ಚಿಂತನೆ ಹಾಗೂ ಸಾಮಾಜಿಕ ನ್ಯಾಯದ ಮೌಲ್ಯಗಳನ್ನು ಮೈಗೂಡಿಸಿಕೊಂಡು ಸ್ವಾಭಿಮಾನ, ಸಮಾನತೆ ಮತ್ತು ಮಹಿಳಾ ಸಬಲೀಕರಣ ಆಧಾರಿತ ಸಮಾಜ ನಿರ್ಮಾಣಕ್ಕೆ ಎಲ್ಲರೂ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಹಾಸನ ಜಿಲ್ಲಾಧಿಕಾರಿ ಕಚೇರಿಯಲ್ಲಿ ಕೋಟ್ಯಂತರ ರೂಪಾಯಿ ಭ್ರಷ್ಟಾಚಾರದ ಆರೋಪ: ಸ್ವತಂತ್ರ ತನಿಖೆಗೆ ಜೆಡಿಎಸ್ ಶಾಸಕರ ಆಗ್ರಹ ಮುಖ್ಯ ಕಾರ್ಯದರ್ಶಿಗಳಿಗೆ ದೂರು ಸಲ್ಲಿಕೆ; ವಾಟ್ಸ್‌ಆ್ಯಪ್ ಸಂಭಾಷಣೆಗಳ ವಿಧಿವಿಜ್ಞಾನ ಪರೀಕ್ಷೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮಕ್ಕೆ ಒತ್ತಾಯ

"ಮುಂಜಾನೆಯ ಮೆರಗು"

ಬೆಂಗಳೂರು ನ, 11– ಹಾಸನ ಜಿಲ್ಲಾಧಿಕಾರಿ ಕಚೇರಿಯಲ್ಲಿ ಕೋಟ್ಯಂತರ ರೂಪಾಯಿ ಹಣಕಾಸಿನ ವ್ಯವಹಾರ ಹಾಗೂ ಭ್ರಷ್ಟಾಚಾರ ನಡೆದಿದೆ ಎಂಬ ಆರೋಪಗಳ ಕುರಿತು ಉನ್ನತ ಮಟ್ಟದ ಸ್ವತಂತ್ರ ತನಿಖೆ ನಡೆಸುವಂತೆ ಆಗ್ರಹಿಸಿ ಜೆಡಿಎಸ್ ಶಾಸಕರ ನಿಯೋಗವು ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳನ್ನು ಭೇಟಿ ಮಾಡಿ ದೂರು ಸಲ್ಲಿಸಿದೆ.

ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಹಾಗೂ ಚಿಕ್ಕನಾಯಕನಹಳ್ಳಿ ಶಾಸಕ ಸಿ.ಬಿ. ಸುರೇಶ್ ಬಾಬು, ವಿಧಾನ ಪರಿಷತ್ ಸದಸ್ಯ ಹಾಗೂ ಜೆಡಿಎಸ್ ಶಾಸಕಾಂಗ ಪಕ್ಷದ ಉಪನಾಯಕ ಟಿ.ಎ. ಶರವಣ ಮತ್ತು ಶಾಸಕ ರಾಜುಗೌಡ ಪಾಟೀಲ್ ಅವರು ನಿಯೋಗದಲ್ಲಿದ್ದು, ಹಾಸನ ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದಿದೆ ಎನ್ನಲಾದ ಹಣಕಾಸಿನ ಅಕ್ರಮಗಳ ಗಂಭೀರತೆಯನ್ನು ಮುಖ್ಯ ಕಾರ್ಯದರ್ಶಿಗಳ ಗಮನಕ್ಕೆ

ಹೋಮ–ಹವನ ನಮ್ಮ ಸಂಸ್ಕೃತಿಯಲ್ಲ; ಬಸವಾದಿ ಶರಣರು ಇವುಗಳನ್ನು ವಿರೋಧಿಸಿದ್ದರು: ಪಂಡಿತಾರಾಧ್ಯ ಶ್ರೀ

ಮೂಢನಂಬಿಕೆಗಳಿಂದ ಹೊರಬಂದು ಸಮಸಮಾಜ ನಿರ್ಮಾಣಕ್ಕೆ ಕೈಜೋಡಿಸಿ

"ಮುಂಜಾನೆಯ ಮೆರಗು"

ಜಗಳೂರು, ನ.11: ಹೋಮ–ಹವನಗಳು ಬಸವಾದಿ ಶರಣರ ಸಂಸ್ಕೃತಿಯಲ್ಲ. ಶರಣರು ಇಂತಹ ಆಚರಣೆಗಳನ್ನು ವಿರೋಧಿಸಿ, ಸಮಾಜದಲ್ಲಿ ಎಲ್ಲರೂ ಸಮಾನರು ಎಂಬ ಮಾನವೀಯ ಮೌಲ್ಯವನ್ನು ಸಾರಿದ್ದಾರೆ. ಆದ್ದರಿಂದ ಪ್ರತಿಯೊಬ್ಬರೂ ಮೂಢನಂಬಿಕೆಗಳಿಂದ ಹೊರಬಂದು ಬಸವಾದಿ ಶರಣರು ತೋರಿಸಿಕೊಟ್ಟ ಸಮಾನತೆಯ ಮಾರ್ಗದಲ್ಲಿ ಸಾಗಬೇಕು ಎಂದು ಸಾಣೇಹಳ್ಳಿಯ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ ಕರೆ ನೀಡಿದರು.

ಪಟ್ಟಣದ ಎಪಿಎಂಸಿ ಸಮೀಪ ಬುಧವಾರ ಖಾಸಗಿ ವ್ಯಕ್ತಿಯೊಬ್ಬರ ನೂತನ ಗೃಹಪ್ರವೇಶ ಸಮಾರಂಭಕ್ಕೆ ಆಗಮಿಸಿದ್ದ ಶ್ರೀಗಳು, ವೇದಿಕೆ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಮಾತನಾಡಿದರು.

ನೂತನ ಮನೆ ನಿರ್ಮಿಸಿ ಗೃಹಪ್ರವೇಶ ಮಾಡುವ ಸಂದರ್ಭದಲ್ಲಿ ಹೋಮ–ಹವನಗಳನ್ನು ನಡೆಸುವುದು ಸಂಪ್ರದಾಯವೆಂದು ಭಾವಿಸಲಾಗಿದೆ.




ಆದರೆ ಇಂತಹ ಆಚರಣೆಗಳು ಬಸವಾದಿ ಶರಣರ ವಿಚಾರಧಾರೆಗೆ ವಿರುದ್ಧವಾಗಿವೆ. ಹೋಮ–ಹವನಗಳಿಂದ ಆರೋಗ್ಯ ಹಾಗೂ ಪರಿಸರದ ಮೇಲೆ ಉಂಟಾಗುವ ಪರಿಣಾಮಗಳ ಬಗ್ಗೆಯೂ ಅರಿವು ಹೊಂದಬೇಕು. ಪ್ರಕೃತಿಗೆ ವಿರುದ್ಧವಾದ ಆಚರಣೆಗಳಿಗೆ ಮಹತ್ವ ನೀಡದೆ, ಶರಣರ ತತ್ವಾದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಸಮಾಜದಲ್ಲಿ ಜಾತಿ, ಧರ್ಮ ಹಾಗೂ ಮೇಲು–ಕೀಳು ಎಂಬ ಭೇದಭಾವಗಳನ್ನು ಬದಿಗಿಟ್ಟು ಪ್ರತಿಯೊಬ್ಬರೂ ಒಂದೇ ಎಂಬ ಸಮಾನತೆಯ ಮನೋಭಾವ ಬೆಳೆಸಿಕೊಳ್ಳಬೇಕು. ಪೋಷಕರು ಮಕ್ಕಳಿಗೆ ಕೇವಲ ಅಂಕಗಳಿಸುವ ಶಿಕ್ಷಣವಷ್ಟೇ ಅಲ್ಲದೆ, ಉತ್ತಮ ಗುಣಮಟ್ಟದ ಶಿಕ್ಷಣದೊಂದಿಗೆ ಮಾನವೀಯ ಮೌಲ್ಯ ಮತ್ತು ಸಂಸ್ಕಾರಗಳನ್ನು ಕಲಿಸಬೇಕು. ಮೂಢನಂಬಿಕೆಗಳಿಂದ ಹೊರಬಂದು ವೈಚಾರಿಕ ಹಾಗೂ ವೈಜ್ಞಾನಿಕ ಮನೋಭಾವ ಬೆಳೆಸಿಕೊಳ್ಳುವಂತೆ ಅವರು ಸಲಹೆ ನೀಡಿದರು.

ಶಾಸಕ ಬಿ. ದೇವೇಂದ್ರಪ್ಪ ಮಾತನಾಡಿ, ಪಂಡಿತಾರಾಧ್ಯ ಶ್ರೀಗಳು ಸಮಾಜಮುಖಿ ಕಾರ್ಯಗಳಿಗೆ ಸದಾ ಆದ್ಯತೆ ನೀಡುತ್ತಿದ್ದು, ಸಮಸಮಾಜ ನಿರ್ಮಾಣಕ್ಕೆ ಶ್ರಮಿಸುತ್ತಿದ್ದಾರೆ. ಬಸವಾದಿ ಶರಣರ ತತ್ವಗಳ ಸಾರವನ್ನು ಜನಸಾಮಾನ್ಯರಿಗೆ ತಲುಪಿಸುವ ಮೂಲಕ ಸಮಾಜದಲ್ಲಿ ಜಾಗೃತಿ ಮೂಡಿಸುತ್ತಿರುವ ಅವರ ಕಾರ್ಯ ಶ್ಲಾಘನೀಯ ಎಂದರು.

ಮಾಜಿ ಶಾಸಕ ಎಚ್.ಪಿ. ರಾಜೇಶ್ ಮಾತನಾಡಿ, ಜಗಳೂರು ತಾಲೂಕಿನಲ್ಲಿ ಅನುಷ್ಠಾನಗೊಂಡಿರುವ ಎರಡು ಏತ ನೀರಾವರಿ ಯೋಜನೆಗಳಲ್ಲಿಯೂ ಶ್ರೀಗಳ ಪಾತ್ರ ಮಹತ್ತದ್ದಾಗಿದೆ. ಸಾಮಾಜಿಕ ಪರಿವರ್ತನೆ, ಮೌಢ್ಯಾಚರಣೆಗಳ ವಿರುದ್ಧ ಜಾಗೃತಿ ಹಾಗೂ ಸಮಾನತೆಯ ಸಮಾಜ ನಿರ್ಮಾಣಕ್ಕೆ ಶ್ರೀಗಳು ನಿರಂತರವಾಗಿ ಶ್ರಮಿಸುತ್ತಿದ್ದಾರೆ. ಶ್ರೀಮಠದ ವತಿಯಿಂದ ಶಿವಸಂಚಾರ ನಾಟಕಗಳ ಮೂಲಕ ಜನರಲ್ಲಿ ಸಾಮಾಜಿಕ ಅರಿವು ಮೂಡಿಸುತ್ತಿರುವುದು ಉತ್ತಮ ಕಾರ್ಯವಾಗಿದೆ. ಇದೀಗ ಕೆರೆಗಳಿಗೆ ನೀರು ಹರಿದುಬಂದಿದ್ದು, ರೈತರು ಲಭ್ಯವಿರುವ ನೀರನ್ನು ಸಮರ್ಪಕವಾಗಿ ಸದ್ಬಳಕೆ ಮಾಡಿಕೊಂಡು ಕೃಷಿ ಚಟುವಟಿಕೆಗಳಿಗೆ ಬಳಸಿಕೊಳ್ಳಬೇಕು ಎಂದು ತಿಳಿಸಿದರು.



ಕೆಪಿಸಿಸಿ ಸದಸ್ಯ ಕೆ.ಪಿ. ಪಾಲಯ್ಯ ಸೇರಿದಂತೆ ವಿವಿಧ ಮುಖಂಡರು ಮಾತನಾಡಿದರು.

ಈ ಸಂದರ್ಭದಲ್ಲಿ ನಿವೃತ್ತ ಉಪನ್ಯಾಸಕ ಸುಭಾಷ್ ಚಂದ್ರ ಬೋಸ್ ಸೇರಿದಂತೆ ಹಲವು ಗಣ್ಯರು, ಮುಖಂಡರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ಒನಕೆ ಓಬವ್ವ ಅವರ ಧೈರ್ಯ, ಸಾಹಸ ಇಂದಿನ ಮಹಿಳೆಯರಿಗೆ ಸ್ಫೂರ್ತಿ

ಮಹಿಳಾ ಶಕ್ತಿ, ಸ್ವಾಭಿಮಾನ ಹಾಗೂ ದೇಶಪ್ರೇಮದ ಪ್ರತೀಕ ವೀರ ವನಿತೆ ಒನಕೆ ಓಬವ್ವ: ಕೆ.ಪಿ. ಪಾಲಯ್ಯ

"ಮುಂಜಾನೆಯ ಮೆರಗು"

ಜಗಳೂರು ನ, 11– ಪಟ್ಟಣದ ಶಾಸಕರ ಜನಸಂಪರ್ಕ ಕಚೇರಿಯಲ್ಲಿ ಕಾಂಗ್ರೆಸ್ ಪಕ್ಷದ ವತಿಯಿಂದ ಬುಧವಾರ ಆಯೋಜಿಸಲಾಗಿದ್ದ ವೀರ ವನಿತೆ ಒನಕೆ ಓಬವ್ವ ಅವರ ಜಯಂತ್ಯೋತ್ಸವ ಕಾರ್ಯಕ್ರಮವನ್ನು ಗೌರವಪೂರ್ವಕವಾಗಿ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಒನಕೆ ಓಬವ್ವ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಗೌರವ ನಮನ ಅರ್ಪಿಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಕಾಂಗ್ರೆಸ್ ಪಕ್ಷದ ಮುಖಂಡ ಕೆ.ಪಿ. ಪಾಲಯ್ಯ ಅವರು, ವೀರ ವನಿತೆ ಒನಕೆ ಓಬವ್ವ ಅವರು ಮಹಿಳಾ ಸಂಕುಲಕ್ಕೆ ಮಾತ್ರವಲ್ಲದೆ ಇಡೀ ಸಮಾಜಕ್ಕೆ ಮಾದರಿಯಾಗಿರುವ ಅಪ್ರತಿಮ ಸಾಹಸಿ ಮಹಿಳೆ ಎಂದು ಬಣ್ಣಿಸಿದರು.

ನಾಡಿನ ಸ್ವಾಭಿಮಾನ ಮತ್ತು ಕೋಟೆ–ಯ ರಕ್ಷಣೆಗಾಗಿ ಶತ್ರುಗಳ ವಿರುದ್ಧ ಒಬ್ಬಂಟಿಯಾಗಿ ಒನಕೆಯನ್ನು ಆಯುಧವನ್ನಾಗಿ ಮಾಡಿಕೊಂಡು ಕೆಚ್ಚೆದೆಯಿಂದ ಹೋರಾಡಿದ ಅವರ



ಸಾಹಸ, ಧೈರ್ಯ ಹಾಗೂ ಸಮಯಪ್ರಜ್ಞೆ ಇತಿಹಾಸದಲ್ಲಿ ಅಚ್ಚಳಿಯದೆ ಉಳಿದಿವೆ. ಪುರುಷರಿಗೂ ಸವಾಲಾಗುವಂತಹ ಸಂದರ್ಭದಲ್ಲಿ ಎದೆಗುಂದದೆ ಶತ್ರುಗಳನ್ನು ಎದುರಿಸಿ ಸಂಸ್ಥಾನವನ್ನು ರಕ್ಷಿಸಿದ ಅವರ ಶೌರ್ಯ ಪ್ರತಿಯೊಬ್ಬರಲ್ಲೂ ದೇಶಪ್ರೇಮ ಮತ್ತು ಆತ್ಮವಿಶ್ವಾಸವನ್ನು ಮೂಡಿಸುತ್ತದೆ ಎಂದು ತಿಳಿಸಿದರು.

ಒನಕೆ ಓಬವ್ವ ಅವರ ಧೈರ್ಯ, ಸಾಹಸ, ಶೌರ್ಯ ಹಾಗೂ ದೇಶಪ್ರೇಮ ಇಂದಿನ ಯುವ ಪೀಳಿಗೆಗೆ ಸದಾ ಪ್ರೇರಣೆಯಾಗಿವೆ. ಮಹಿಳೆಯರು ಯಾವುದೇ ಕ್ಷೇತ್ರದಲ್ಲೂ ಪುರುಷರಿಗೆ ಕಡಿಮೆಯಿಲ್ಲ ಎಂಬುದನ್ನು ತಮ್ಮ ಅಪ್ರತಿಮ ಹೋರಾಟದ ಮೂಲಕ ಸಾಬೀತುಪಡಿಸಿದ ಒನಕೆ ಓಬವ್ವ ಅವರು ಮಹಿಳಾ ಶಕ್ತಿಯ ಪ್ರತೀಕವಾಗಿದ್ದಾರೆ. ಅವರ ಜೀವನಗಾಥೆ ಮಹಿಳೆಯರಲ್ಲಿ ಆತ್ಮಸ್ಥೈರ್ಯ, ಸ್ವಾಭಿಮಾನ ಮತ್ತು ಹೋರಾಟದ ಮನೋಭಾವ ಬೆಳೆಸುವ ಶಕ್ತಿಯನ್ನು ಹೊಂದಿದೆ ಎಂದರು.

ಮಹಿಳಾ ಶಕ್ತಿ, ಸ್ವಾಭಿಮಾನ, ಧೈರ್ಯ, ತ್ಯಾಗ ಹಾಗೂ ನಾಡಿನ ಮೇಲಿನ ಅಭಿಮಾನವನ್ನು ಪ್ರತಿನಿಧಿಸುವ ಒನಕೆ ಓಬವ್ವ ಅವರ ಆದರ್ಶಗಳನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಇತಿಹಾಸದ ಪುಟಗಳಲ್ಲಿ ದಾಖಲಾಗಿರುವ ಇಂತಹ ಮಹಾನ್ ವೀರ ಮಹಿಳೆಯರ ಸಾಧನೆ ಮತ್ತು ಕೊಡುಗೆಗಳನ್ನು ಕೇವಲ ಜಯಂತಿ ಆಚರಣೆಗೆ ಸೀಮಿತಗೊಳಿಸದೆ, ಅವರ ಜೀವನ ಮೌಲ್ಯಗಳನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಕಾರ್ಯವಾಗಬೇಕು. ಯುವಜನರಲ್ಲಿ ನಾಡು, ನುಡಿ, ಸಂಸ್ಕೃತಿ ಮತ್ತು ದೇಶಪ್ರೇಮದ ಜಾಗೃತಿ ಮೂಡಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಶಾಸಕರು, ಮಾಜಿ ಶಾಸಕರು, ಕಾಂಗ್ರೆಸ್ ಪಕ್ಷದ ಮುಖಂಡರು, ತಾಲ್ಲೂಕು ಆಡಳಿತದ ಅಧಿಕಾರಿಗಳು, ಜನಪ್ರತಿನಿಧಿಗಳು, ವಿವಿಧ ಸಂಘಟನೆಗಳ ಪದಾಧಿಕಾರಿಗಳು, ಪಕ್ಷದ ಕಾರ್ಯಕರ್ತರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದು ವೀರ ವನಿತೆ ಒನಕೆ ಓಬವ್ವ ಅವರಿಗೆ ಗೌರವ ನಮನ ಸಲ್ಲಿಸಿದರು.

ನ.16ರಿಂದ ಅಹೋರಾತ್ರಿ ಧರಣಿ, ನ.25ರಂದು ವಿಧಾನಸೌಧ ಚಲೋ: ಸೈಯದ್ ನೂರ್ ಅಹಮ್ಮದ್



"ಮುಂಜಾನೆಯ ಮೆರಗು"

ಜಗಳೂರು, ನ.11– ಕೋಳಿ ಸಾಕಾಣಿಕೆ ರೈತರಿಗೆ ಪ್ರತಿ ಕೆ.ಜಿ. ಕೋಳಿ ಸಾಕಾಣಿಕೆಗೆ ಕನಿಷ್ಠ 10 ವೆಚ್ಚ ನೀಡುವಂತೆ ಸರ್ಕಾರ ಹೊರಡಿಸಿರುವ ಆದೇಶವನ್ನು ಜಾರಿಗೊಳಿಸಬೇಕು ಎಂದು ಆಗ್ರಹಿಸಿ ನವೆಂಬರ್ 16ರಂದು ಅಹೋರಾತ್ರಿ ಧರಣಿ ಹಾಗೂ ನವೆಂಬರ್ 25ರಂದು ವಿಧಾನಸೌಧ ಚಲೋ ಹೋರಾಟ ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ರಾಜ್ಯ ಕೋಳಿ ಸಾಕಾಣಿಕೆದಾರ ರೈತರ ಕ್ಷೇಮಾಭಿವೃದ್ಧಿ ಸಂಘದ ರಾಜ್ಯ ಸಹಕಾರ್ಯದರ್ಶಿ ಸೈಯದ್ ನೂರ್ ಅಹಮ್ಮದ್ ತಿಳಿಸಿದರು.

ಪಟ್ಟಣದ ಪತ್ರಿಕಾಭವನದಲ್ಲಿ ಬುಧವಾರ ಆಯೋಜಿಸಿದ್ದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು.

ಕಳೆದ ಎರಡು ವರ್ಷಗಳಿಂದ ಕೋಳಿ ಸಾಕಾಣಿಕೆ ರೈತರು ಪ್ರತಿ ಕೆ.ಜಿ.ಗೆ 20 ಸಾಕಾಣಿಕೆ ವೆಚ್ಚ ನೀಡುವಂತೆ ಒತ್ತಾಯಿಸಿ ನಿರಂತರ ಹೋರಾಟ ನಡೆಸುತ್ತಾ ಬಂದಿದ್ದಾರೆ. ಈ ಹಿನ್ನೆಲೆಯಲ್ಲಿ ಇಂಟಿಗ್ರೇಷನ್ ಕಂಪನಿಗಳ ಪ್ರತಿನಿಧಿಗಳು ಹಾಗೂ ರೈತರ ನಡುವೆ ನಡೆದ ಮಾತುಕತೆ ಮತ್ತು ಪರಸ್ಪರ ಒಪ್ಪಂದದ ಮೇರೆಗೆ ಪ್ರತಿ ಕೆ.ಜಿ. ಕೋಳಿ ಸಾಕಾಣಿಕೆಗೆ 10 ವೆಚ್ಚ ನಿಗದಿಪಡಿಸಿ ಸರ್ಕಾರ ಅನುಮೋದನೆ ನೀಡಿತ್ತು. ಆದರೆ, ಸರ್ಕಾರದ ನಾಯಕತ್ವದಲ್ಲಿ ಬದಲಾವಣೆಯಾದ ನಂತರವೂ ಹಿಂದಿನ ಆದೇಶವನ್ನು ಸಮರ್ಪಕವಾಗಿ ಜಾರಿಗೊಳಿಸಲು ಸರ್ಕಾರ ಮುಂದಾಗಿಲ್ಲ. ಇದನ್ನೇ ನೆಪವಾಗಿಸಿಕೊಂಡು ಕಂಪನಿಗಳು ವಿವಿಧ ಸಬೂಬುಗಳನ್ನು ಹೇಳುತ್ತಾ ರೈತರನ್ನು ನಿರಂತರವಾಗಿ ಶೋಷಿಸುತ್ತಿವೆ ಎಂದು ಆರೋಪಿಸಿದರು.

ರೈತರ ನ್ಯಾಯಯುತ ಬೇಡಿಕೆ ಈಡೇರುವವರೆಗೂ ಹೋರಾಟ ಮುಂದುವರಿಸಲು ಸಂಘಟನೆ ನಿರ್ಧರಿಸಿದೆ. ಇದರ ಭಾಗವಾಗಿ ನವೆಂಬರ್ 16ರಿಂದ ರಾಣೆಬೆನ್ನೂರು ತಾಲ್ಲೂಕಿನ ಕೃಷ್ಣಾಪುರ–ತೆರೆದಹಳ್ಳಿ ಸಮೀಪದಲ್ಲಿರುವ ವೆಂಕಟೇಶ್ವರ ಪ್ರೈವೇಟ್ ಕಂಪನಿ ಲಿಮಿಟೆಡ್ ಮುಂಭಾಗದಲ್ಲಿ ಅಹೋರಾತ್ರಿ ಧರಣಿ ನಡೆಸಲಾಗುವುದು. ರಾಜ್ಯದ ವಿವಿಧ ಜಿಲ್ಲೆಗಳಿಂದ ಸುಮಾರು 5 ಸಾವಿರ ಕೋಳಿ ಸಾಕಾಣಿಕೆ ರೈತರು ಭಾಗವಹಿಸುವ ನಿರೀಕ್ಷೆಯಿದೆ. ಬಳಿಕ ನವೆಂಬರ್ 25ರಂದು ಬೆಂಗಳೂರಿನ ವಿಧಾನಸೌಧಕ್ಕೆ ಮುತ್ತಿಗೆ ಹಾಕುವ ಉದ್ದೇಶದಿಂದ ವಿಧಾನಸೌಧ ಚಲೋ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಇಷ್ಟಾದರೂ ಸರ್ಕಾರ ಹಾಗೂ ಕಂಪನಿಗಳು ರೈತರ ಬೇಡಿಕೆಗಳಿಗೆ ಸ್ಪಂದಿಸದಿದ್ದರೆ ಕೋಳಿ ಮರಿಗಳ ಆಮದು ಹಾಗೂ ಕೋಳಿಗಳ ಮಾರಾಟ ಪ್ರಕ್ರಿಯೆಯನ್ನು ಸ್ಥಗಿತಗೊಳಿಸಿ ಹೋರಾಟ ತೀವ್ರಗೊಳಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಜಗಳೂರು ತಾಲ್ಲೂಕಿನಲ್ಲಿ 200ಕ್ಕೂ ಅಧಿಕ ಕೋಳಿ ಸಾಕಾಣಿಕೆ ರೈತರಿದ್ದು, ಸ್ನೇಹ, ಗೋಲ್ಡನ್ ಹಾಗೂ ವೆನ್‌ಕಾಫ್ ಸೇರಿದಂತೆ ವಿವಿಧ ಕಂಪನಿಗಳೊಂದಿಗೆ ವ್ಯವಹಾರ ನಡೆಸುತ್ತಿದ್ದಾರೆ. ಕೋಳಿ ಸಾಕಾಣಿಕೆಯನ್ನೇ ನಂಬಿಕೊಂಡು ಜೀವನ ನಡೆಸುತ್ತಿರುವ ರೈತರ ಹಿತದೃಷ್ಟಿಯಿಂದ ಸರ್ಕಾರ ಕೂಡಲೇ ಮಧ್ಯಪ್ರವೇಶಿಸಿ ನಿಗದಿತ ಸಾಕಾಣಿಕೆ ವೆಚ್ಚದ ಆದೇಶವನ್ನು ಜಾರಿಗೊಳಿಸಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಸಂಘಟನೆಯ ರಾಜ್ಯ ಪದಾಧಿಕಾರಿಗಳಾದ ಸಾಧಿಕ್ ಉಲ್ಲಾ, ಲೋಕೇಶಪ್ಪ, ಮೋಹನ್ ಕುಮಾರ್, ರಹಮತ್ ಉಲ್ಲಾ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ನೀರಾವರಿ ಸೌಲಭ್ಯದಿಂದ ವಂಚಿತ ಕೆರೆಗಳಿಗೂ ನೀರು ಹರಿಸಲು ಕಲ್ಲೇರುದ್ರೇಶಪ್ಪ ಒತ್ತಾಯ

"ಮುಂಜಾನೆಯ ಮೆರಗು"

ಜಗಳೂರು, ನ.11– ತಾಲೂಕಿನ 57 ಕೆರೆ ತುಂಬಿಸುವ ಯೋಜನೆ ಯಶಸ್ವಿಯಾಗಿ ಅನುಷ್ಠಾನಗೊಂಡಿರುವುದು ಸ್ವಾಗತಾರ್ಹ. ಇದೇ ಯೋಜನೆಯಡಿ ನೀರಿನ ಸೌಲಭ್ಯದಿಂದ ವಂಚಿತವಾಗಿರುವ ಹೆಚ್ಚುವರಿ ಹತ್ತುಕ್ಕೂ ಹೆಚ್ಚು ಕೆರೆಗಳಿಗೂ ನೀರು ಹರಿಸುವ ಮೂಲಕ ರೈತರ ಹಿತ ಕಾಪಾಡಬೇಕು ಎಂದು ಜೆಡಿಎಸ್ ರಾಜ್ಯ ಪ್ರಧಾನ ಕಾರ್ಯದರ್ಶಿ ಕೆ.ಬಿ. ಕಲ್ಲೇರುದ್ರೇಶಪ್ಪ ಆಗ್ರಹಿಸಿದರು.

ಪಟ್ಟಣದ ಪತ್ರಿಕಾಭವನದಲ್ಲಿ ಬುಧವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, 57 ಕೆರೆಗಳಿಗೆ ನೀರು ಹರಿದಿರುವುದರಿಂದ ಅಂತರ್ಜಲ ವೃದ್ಧಿ ಹಾಗೂ ಕೃಷಿ ಚಟುವಟಿಕೆಗಳಿಗೆ ಅನುಕೂಲವಾಗಿದೆ. ಆದರೆ ಸಂಗೇನಹಳ್ಳಿ, ಜಮ್ಮಾಪುರ, ಭರಮಸಮುದ್ರ, ಬಿದರಕೆರೆ, ಕಣುಕುಪ್ಪೆ, ಗುಡ್ಡದಲಿಂಗಣ್ಣನಹಳ್ಳಿ, ಮೆದಕೆರೆನಹಳ್ಳಿ, ಬೋರಪುರ ಸೇರಿದಂತೆ ಹಲವು ಗ್ರಾಮಗಳ ಕೆರೆಗಳಿಗೆ ಇನ್ನೂ ನೀರು ತಲುಪಿಲ್ಲ. ಈ ಕೆರೆಗಳ ಅಚ್ಚುಕಟ್ಟು ವ್ಯಾಪ್ತಿಯ ರೈತರು ನೀರಿನ ಸೌಲಭ್ಯದಿಂದ ವಂಚಿತರಾಗಿದ್ದು, ಅಂತರ್ಜಲ ಮಟ್ಟ ಕುಸಿತದಿಂದ ತೀವ್ರ ಸಂಕಷ್ಟ ಎದುರಿಸುತ್ತಿದ್ದಾರೆ. ಆದ್ದರಿಂದ ಹೆಚ್ಚುವರಿ ಕೆರೆಗಳಿಗೂ ನೀರು ಹರಿಸುವಂತೆ ರೈತರಿಂದ ಒತ್ತಾಯ ಕೇಳಿಬರುತ್ತಿದೆ ಎಂದು ತಿಳಿಸಿದರು.

ಕರ್ನಾಟಕ ನೀರಾವರಿ ನಿಗಮದ ಅಧಿಕಾರಿಗಳು 57 ಕೆರೆಗಳಿಗೆ ನಿಗದಿಪಡಿಸಿರುವ 1.39 ಟಿಎಂಸಿ ನೀರಿನ ಪ್ರಮಾಣಕ್ಕೆ ಧಕ್ಕೆಯಾಗದಂತೆ ಹೆಚ್ಚುವರಿ ನೀರು ಬಿಡುಗಡೆಗೆ ಕ್ರಮ ಕೈಗೊಳ್ಳಬೇಕು. ಇದಕ್ಕಾಗಿ ಅಗತ್ಯ ಅನುದಾನ ಮಂಜೂರು ಮಾಡಬೇಕು. ಹೆಚ್ಚುವರಿ ಕೆರೆಗಳಿಗೆ ನೀರು ಹರಿಸಲು ತಾಂತ್ರಿಕವಾಗಿ ಸಾಧ್ಯವಿದೆಯೇ ಎಂಬುದನ್ನು ಪರಿಶೀಲಿಸಿ, ಹೈಡ್ರೋಜಿಯಾಲಜಿಕಲ್ ಸರ್ವೆ ನಡೆಸಬೇಕು. ಪ್ರತಿ ಕೆರೆಗೆ ಹಂಚಿಕೆಯಾಗುವ ನೀರಿನ ಪ್ರಮಾಣವನ್ನು ವೈಜ್ಞಾನಿಕವಾಗಿ ನಿರ್ಧರಿಸಿ, ಎಲ್ಲ ಕೆರೆಗಳಿಗೂ ನೀರು ತಲುಪಿಸುವ ಸಮಗ್ರ ಯೋಜನೆ ರೂಪಿಸಬೇಕು ಎಂದು ಒತ್ತಾಯಿಸಿದರು.

ಈ ವಿಚಾರದಲ್ಲಿ ಸಂಬಂಧಪಟ್ಟ ನೀರಾವರಿ ಇಲಾಖೆ ಅಧಿಕಾರಿಗಳು, ಚುನಾಯಿತ ಪ್ರತಿನಿಧಿಗಳು ಹಾಗೂ ಜಿಲ್ಲಾ



ಮತ್ತು ತಾಲೂಕು ಆಡಳಿತ ಸ್ಪಷ್ಟ ನಿಲುವು ಪ್ರಕಟಿಸಬೇಕು. ನೀರಿನ ಸೌಲಭ್ಯದಿಂದ ವಂಚಿತವಾಗಿರುವ ಗ್ರಾಮಗಳ ರೈತರ ಸಮಸ್ಯೆಗೆ ಆದ್ಯತೆ ನೀಡಿ ಪರಿಹಾರ ಕಲ್ಪಿಸಬೇಕು ಎಂದು ಆಗ್ರಹಿಸಿದರು.

57 ಕೆರೆ ತುಂಬಿಸುವ ಯೋಜನೆಗೆ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಅಧಿಕಾರಾವಧಿಯ ಕೊನೆಯಲ್ಲಿ 250 ಕೋಟಿ ಅನುದಾನ ಮಂಜೂರು ಮಾಡಿದ್ದರು. ನಂತರ ಮುಖ್ಯಮಂತ್ರಿಯಾಗಿದ್ದ ಎಚ್.ಡಿ. ಕುಮಾರಸ್ವಾಮಿ ಅವರು 660 ಕೋಟಿ ಅನುದಾನ ಬಿಡುಗಡೆ ಮಾಡಿದ್ದರು. ತದನಂತರ ಮುಖ್ಯಮಂತ್ರಿಯಾಗಿದ್ದ ಬಿ.ಎಸ್. ಯಡಿಯೂರಪ್ಪ ಅವರು ಆ ಅನುದಾನವನ್ನು ಬಿಡುಗಡೆಗೊಳಿಸಿದ್ದರು ಎಂದು ಯೋಜನೆಯ ಹಿನ್ನೆಲೆಯನ್ನು ವಿವರಿಸಿದರು.

ಈ ಸಂದರ್ಭದಲ್ಲಿ ಜೆಡಿಎಸ್ ತಾಲೂಕು ಅಧ್ಯಕ್ಷ ಗೋಡೆ ಸಿದ್ದೇಶ್, ಸಣ್ಣ ತಿಪ್ಪೇಸ್ವಾಮಿ, ಉದ್ದಗಟ್ಟ ಲಕ್ಷ್ಮಣ್, ಉಸ್ಮಾನ್ ಅಲಿ, ಯಲ್ಲಪ್ಪ, ಮಹಿಳಾ ಘಟಕದ ಅಧ್ಯಕ್ಷೆ ಸುನಂದಮ್ಮ ಯಲ್ಲಪ್ಪ ಸೇರಿದಂತೆ ಪಕ್ಷದ ಮುಖಂಡರು ಉಪಸ್ಥಿತರಿದ್ದರು.

ಒನಕೆ ಓಬವ್ವಳ ಶೌರ್ಯ, ತ್ಯಾಗ ಯುವಜನತೆಗೆ ಆದರ್ಶವಾಗಲಿ: ಶಾಸಕ ದೇವೇಂದ್ರಪ್ಪ

ಮಹಾನೀಯರ ಜೀವನಚರಿತ್ರೆ ಆಂತರಿಕ ಶುದ್ಧಿ ಹಾಗೂ ಉತ್ತಮ ವ್ಯಕ್ತಿತ್ವ ರೂಪಿಸಲು ಪ್ರೇರಣೆ

"ಮುಂಜಾನೆಯ ಮೆರಗು"

ಜಗಳೂರು, ನ.11– ಮಹಾನೀಯರ ಜೀವನಚರಿತ್ರೆ, ಆದರ್ಶಗಳು ಹಾಗೂ ಅವರು ಸಾರಿದ ಮೌಲ್ಯಗಳು ಮನುಷ್ಯನ ಆಂತರಿಕ ಶುದ್ಧಿಗೆ ಪ್ರೇರಣೆ ನೀಡುವುದರ ಜತೆಗೆ ಉತ್ತಮ ವ್ಯಕ್ತಿತ್ವ ರೂಪಿಸಿಕೊಳ್ಳಲು ಮಾರ್ಗದರ್ಶನವಾಗುತ್ತವೆ ಎಂದು ಶಾಸಕ ಬಿ.ದೇವೇಂದ್ರಪ್ಪ ಹೇಳಿದರು.

ಪಟ್ಟಣದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಬುಧವಾರ ತಾಲ್ಲೂಕು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಹಾಗೂ ಛಲವಾದಿ ಸಮಾಜದ ಸಹಯೋಗದಲ್ಲಿ ಆಯೋಜಿಸಿದ್ದ ವೀರವನಿತೆ ಒನಕೆ ಓಬವ್ವ ಜಯಂತ್ಯುತ್ಸವದಲ್ಲಿ ಪಾಲ್ಗೊಂಡು ಅವರು ಮಾತನಾಡ